MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 290 | ಗುರುವಾರ :04-09-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 290 | THURSDAY : 04-09-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಸಾಹಸಸಿಂಹ ಡಾ.ವಿಷ್ಣುವರ್ಧನ್‌ಗೆ ಕರ್ನಾಟಕ ರತ್ನ ಸಾಧ್ಯತೆ..?



**ಬೆಂಗಳೂರು, ಸೆ.3–** ನಟ ವಿಷ್ಣುವರ್ಧನ್ ಸಾರಕದ ಭೂ ವಿವಾದ ಹಾಗೂ ಕರ್ನಾಟಕ ರತ್ನ ಪ್ರಶಸ್ತಿ ಕುರಿತಂತೆ ಹಿರಿಯ ನಟಿ ಭಾರತಿ ವಿಷ್ಣುವರ್ಧನ್ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದ್ದಾರೆ.

ಅಳಿಯ ಹಾಗೂ ನಟ ಅನಿರುದ್ಧ ಅವರೊಂದಿಗೆ ಇಂದು ಬೆಳಗ್ಗೆ ಮುಖ್ಯಮಂತ್ರಿ ಅವರ ಅಧಿಕೃತ ನಿವಾಸ ಕಾವೇರಿಗೆ ಆಗಮಿಸಿದ ಭಾರತಿವಿಷ್ಣುವರ್ಧನ್ ಹಲವು ಮನವಿಗಳನ್ನು ಮಾಡಿದ್ದಾರೆ.

ಅಭಿಮಾನ್ ಸ್ಟುಡಿಯೋದಲ್ಲಿ ವಿಷ್ಣುವರ್ಧನ್ ಅವರ ಅಂತ್ಯಸಂಸ್ಕಾರ ನಡೆದಿತ್ತು. ಆದರೆ ರಿಯಲ್ ಎಸ್ಟೇಟ್ ವ್ಯವಹಾರದ ಕಾರಣಕ್ಕಾಗಿ ವಿಷ್ಣುವರ್ಧನ್ ಅವರ **(2ನೇ ಘುಟಕ್ಕೆ)**

## ಸೆ.7 ರಂದು ಹಾಲುಮತ ಪ್ರತಿಭಾ ಪುರಸ್ಕಾರ : ಕುಪ್ಪಣ್ಣ ಕೊಡ್ಲಿ

**ಯುವ ಮಾರ್ಗ ಸುದ್ದಿ**




**ಲಿಂಗಸುಗೂರು,ಸೆ.3–** ಪಟ್ಟಣದ ಕನಕ ಭವನದಲ್ಲಿ ಸೆ.7ರಂದು ಹಾಲುಮತ ಪ್ರತಿಭಾ ಪುರಸ್ಕಾರ ಹಾಗೂ ಸಾಧಕರಿಗೆ ಸನ್ಮಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಎಂದು ಹಾಲುಮತ ಸಮಾಜದ ತಾಲೂಕು ಅದ್ಯಕ್ಷ ಕುಪ್ಪಣ್ಣ ಕೊಡ್ಲಿ ಹೇಳಿದರು.

ಪಟ್ಟಣದ ಪತ್ರಕಾ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿ ನಡೆಸಿದ ಅವರು, ಸೆ.7 ಭಾನುವಾರ ಬೆಳಗ್ಗೆ 10 ಗಂಟೆಗೆ ಕಾರ್ಯಕ್ರಮ ಜರುಗಲಿದ್ದು, ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯ 2024-25ನೇ ಸಾಲಿನ ಪರೀಕ್ಷೆಯಲ್ಲಿ ಶೇ.90ಕ್ಕಿಂತ ಹೆಚ್ಚು ಅಂಕ ಪಡೆದ ಎಲ್ಲಾ ಸಮುದಾಯದ ವಿದ್ಯಾರ್ಥಿಗಳು ಮತ್ತು ಎಂಬಿಬಿಎಸ್ ಕೋರ್ಸ್‌ಗೆ ಆಯ್ಕೆಯಾದ ತಾಲೂಕಿನ ಹಾಲುಮತ ಸಮಾಜದ ವಿದ್ಯಾರ್ಥಿಗಳಿಗೆ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಾಧಕರಿಗೆ ಸನ್ಮಾನ ಹಾಗೂ ಪ್ರತಿಭಾ ಪುರಸ್ಕಾರ ಜರುಗುವುದು. ಹೆಚ್ಚಿನ

ಸಂಖ್ಯೆಯಲ್ಲಿ ಬಾಂಧವರು ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸಬೇಕು. ಎಂದು ಕೋರಿದರು.

ಈ ಸಂದರ್ಭದಲ್ಲಿ ಸಮುದಾಯದ ಮುಖಂಡರಾದ ಬೀರಪ್ಪ ಪೂಜಾರಿ, ಮರಿಯಪ್ಪ, ಗದ್ದೆಪ್ಪ ಈಚನಾಳ, ನೀಲಪ್ಪ ಪೂಜಾರಿ, ಮಲ್ಲಪ್ಪ ದೇವರಮಡಿ, ಪಾಲಕ್ಷ ಸೇರಿ ಇತರರಿದ್ದರು

## ಸಿಸಿ ರಸ್ತೆ ಕಾಮಗಾರಿಗೆ ಭೂಮಿಪೂಜೆ

**ಯುವ ಮಾರ್ಗ ಸುದ್ದಿ**



**ಲಿಂಗಸುಗೂರು,ಸೆ.3** ತಾಲೂಕಿನ ಆನೆಹೊಸೂರು ಗ್ರಾಮದಲ್ಲಿ ವಿಧಾನ ಪರಿಷತ್ ಸದಸ್ಯ ಶರಣಗೌಡ ಪಾಟೀಲ್ ಬಯ್ಯಾಪೂರ ಬುಧವಾರ ಸಿಸಿ ರಸ್ತೆ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದರು.

2024-25ನೇ ಸಾಲಿನ ವಿಧಾನ ಪರಿಷತ್ ಸದಸ್ಯರ ಅನುದಾನದಡಿ 10 ಲಕ್ಷ ರೂಪಾಯಿ ಮಂಜೂರು ಮಾಡಲಾಗಿದ್ದು, ಕಾಮಗಾರಿಯನ್ನು ಗುಣಮಟ್ಟದ್ದಾಗಿ ನಿರ್ಮಿಸಲು ಸ್ಥಳದಲ್ಲಿದ್ದ ಕೆಆರ್‌ಐಡಿಎಲ್ ಅಧಿಕಾರಿಗಳಿಗೆ ಬಯ್ಯಾಪೂರ ತಾಕೀತು ಮಾಡಿದರು.

ಈ ಸಂದರ್ಭದಲ್ಲಿ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಪಾಮಯ್ಯ ಮುರಾರಿ, ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಭೂಪನಗೌಡ ಪಾಟೀಲ್ ಕರಡಕಲ್, ಮುಖಂಡರಾದ ಗುಂಡಪ್ಪ ನಾಯಕ, ಬಸವರಾಜಗೌಡ ಗಣೇಕಲ್, ಡಿಜಿ ಗುರಿಕಾರ, ಬಸವಂತಪ್ಪಗೌಡ, ಪ್ರಕಾಶ ಕುರಿ ಸೇರಿ ಇತರರು ಇದ್ದರು.

## ದಲಿತ ಸಂಘಟನೆಗಳ ಒಕ್ಕೂಟ ವತಿಯಿಂದ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಪ್ರತಿಭಟನೆ



**ಯುವ ಮಾರ್ಗ ಸುದ್ದಿ**

**ಮಾನ್ವಿ,ಸೆ.03–**ಪಟ್ಟಣದ ತಾಲೂಕು ಪಂಚಾಯಿತಿ ಆವರಣದಲ್ಲಿ ದಲಿತ ಸಂಘಟನೆಗಳ ಒಕ್ಕೂಟ ವತಿಯಿಂದ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಒತ್ತಾಯಿಸಿ ನಡೆದ ಆನಿರ್ಧಿಷ್ಟವಾದಿವರೆಗೆ ನಡೆದ ಪ್ರತಿಭಟನೆಯಲ್ಲಿ ದಲಿತ ಮುಖಂಡರಾದ ಶಿವಕುಮಾರ ಮಾತನಾಡಿ ತಾಲೂಕಿನ ಚಿಕ್ಕ ಕೋಟ್ನೆಕಲ್ ಗ್ರಾಮ ಪಂಚಾಯತಿಯಲ್ಲಿ 15 ನೇ ಹಣಕಾಸು ಯೋಜನೆಯಡಿಯಲ್ಲಿ ಅವ್ಯವಹಾರ ನಡೆದಿದ್ದು ತನಿಖೆ ನಡೆಸಿ ಪಿ.ಡಿ.ಓ. ಶಿವಗ್ಯಾನಿ ರವರ ಮೇಲೆ ಕ್ರಮ ಕೈಗೊಳ್ಳಬೇಕು. ಜಾಗೀರ ಪನ್ನೂರು ಗ್ರಾಮದಲ್ಲಿ ಪರಿಶಿಷ್ಟ ಜಾತಿ ಜನಾಂಗದವರ ಮೇಲೆ ಕೇಲವರು ದೌರ್ಜನ್ಯ ಮಾಡುತ್ತಿದ್ದು ಅಂತಹವರ ಮೇಲೆ ಕಾನೂನು ಕ್ರಮ ಕೈಗೊಳ್ಳಬೇಕು. ಹಾಗೂ ಅಸ್ಪರ್ಶತೆ ನಿವಾರಣೆಗಾಗಿ ಜನರಲ್ಲಿ ಜಾಗೃತಿ ಮೂಡಿಸಬೇಕು. ಗ್ರಾಮದ ಸ.ನಂ.11 ಮತ್ತು 12 ರಲ್ಲಿನ ಜಮೀನುಗಳಿಗೆ ಪೋತ್ನಾಳ್ ರಸ್ತೆಯಿಂದ ದಾರಿಯ ವ್ಯವಸ್ಥೆ ಮಾಡಿ ಕೊಡಬೇಕು.ಗ್ರಾಮದಲ್ಲಿ ಹಾದು ಹೋಗುವ ರಾಜ್ಯ ಹೆದ್ದಾರಿ-14 ರಲ್ಲಿ ಬರುವ ಮುಸ್ಲಿಂ ಸಮುದಾಯದವರ ಸ್ಮಾಶನದಿಂದ ಲೊಯೋಲಾ ಆರೋಗ್ಯ ಕೇಂದ್ರದವರೆಗೆ ರಸ್ತೆಯ ಗಡಿಗಳನ್ನು ಗುರುತಿಸಬೇಕು ಮತ್ತು ರಸ್ತೆ ನಿರ್ಮಾಣ ಕಾಮಗಾರಿ ಕಳಪೆಯಾಗಿದ್ದು ಪರಿಶೀಲಿಸಿ ಕ್ರಮ ಕೈಗೊಳ್ಳಬೇಕು. ಗ್ರಾಮದ ಪ.ಜಾತಿ ಕಾಲೋನಿಯಲ್ಲಿನ ವಿದ್ಯುತ್ ಪರಿವರ್ತಕವನ್ನು ಸ್ಥಳಾಂತರಿಸಬೇಕು. ಚರಂಡಿ ಸ್ವಚ್ಛಗೊಳ್ಳಿಸಿ ಪಾಗೀಂಗ್ ಮಾಡಿಸಬೇಕು, ತೆಗ್ಗು ಪ್ರದೇಶದಲ್ಲಿ ನೀರು ನಿಲ್ಲದಂತೆ ಮರಂ ಹಾಕಿಸಬೇಕು. ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಸದಾನಂದ , ಅಬ್ರಹಾಂ ಪನ್ನೂರು, ಬಸವರಾಜ ನಕ್ಕುಂದಿ, ಯಮುನಪ್ಪ, ಪ್ರಸನ್ನ ಕುರ್ಡಿ, ಹುಸೇನಪ್ಪ ಜಗ್ಗಿ, ರವಿಕುಮಾರ ಮ ದ್ಲಾಪುರ್, ರಾಘವೇಂದ್ರ,ಮೀಕೆಲಪ್ಪ, ರವೀಂದ್ರ ಜಾನೇಕಲ್, ರಂಗಮ್ಮ, ಕಾಡಮ್ಮ,ನೀಲಮ್ಮ, ಮರಿಯಮ್ಮ, ಚಿನ್ನಮ್ಮ, ಮಾರೇಮ್ಮ, ಪು ಷ್ಪಮ್ಮ, ದೇವಮ್ಮ,ಯಲ್ಲಮ್ಮ,ಆನಿತಾ,ಲಕ್ಷ್ಮೀ, ಸೇರಿದಂತೆ ಇನ್ನಿತರ ಇದ್ದರು.

## ಪಹಲ್ಗಾಮ್ ದಾಳಿಕೋರರಿಗೆ ವಿದೇಶಿ ಹಣ

**ನವದೆಹಲಿ,ಸೆ.3–**ಜಮ್ಮು-ಕಾಶ್ಮೀರದ ಪಹಲ್ಗಾಮ್ ದಾಳಿಕೋರರಿಗೆ ಪಾಕಿಸ್ತಾನ ಸೇರಿದಂತೆ ವಿದೇಶಗಳಿಂದ ಹಣದ ನೆರವು ಹರಿದು ಬಂದಿರುವುದನ್ನು ರಾಷ್ಟ್ರೀಯ ತನಿಖಾ ಸಂಸ್ಥೆ ಪತ್ತೆ ಹಚ್ಚಿದೆ.

ಪಾಕಿಸ್ತಾನ ಮೂಲದ ಲಕ್ಷರ್-ಇ-ತೊಯ್ಬಾ ಭಯೋತ್ಪಾದಕ ಸಂಘಟನೆಯ ಪ್ರಾಕ್ಸಿ ಗುಂಪಾದ ದಿ ರೆಸಿಸ್ಟೆನ್ಸ್ ಫ್ರಂಟ್ (ಟಿಆರ್‌ಎಫ್)ಗೆ ನಿಂದ ದೊಡ್ಡ ಮಟ್ಟದಲ್ಲಿ ಹಣ ಹರಿದು ಬಂದಿರುವುದನ್ನು ರಾಷ್ಟ್ರೀಯ ತನಿಖಾ ಸಂಸ್ಥೆ ಪತ್ತೆ ಹಚ್ಚಿದೆ.

ಉಗ್ರರನ್ನು ಬೆಂಬಲಿಸುತ್ತಿರುವ ಸುಮಾರು 463 ದೂರವಾಣಿ ಕರೆಗಳನ್ನು ಆಧರಿಸಿ ಟಿಆರ್‌ಎಫ್‌ನ ಹಣಕಾಸು ಮೂಲವನ್ನು ಎನ್‌ಐಎ ಪತ್ತೆ ಹಚ್ಚಿದೆ.

ಲಕ್ಷರ್-ಇ-ತೊಯ್ಬಾ ಪ್ರಾಯೋಜಿತ ಟಿಆರ್‌ಎಫ್‌ಗೆ ಪಾಕಿಸ್ತಾನ, ಮಲೇಶಿಯಾ ಮತ್ತು ಗಲ್ಫ್ ರಾಷ್ಟಗಳಿಂದ ಹಣ ಬಂದಿರುವುದು ಈಗ ಬಹಿರಂಗಗೊಂಡಿದೆ.

ಮಲೇಶಿಯಾದ ನಿವಾಸಿ ಯಾಸೀರ್ ಹಯಾತ್ ಮೂಲಕ ಸುಮಾರು 9 ಲಕ್ಷ ರೂ.ಗಳ ಹಣವನ್ನು ಟಿಆರ್‌ಎಫ್ ಪಡೆದುಕೊಂಡಿದೆ. *2ನೇ ಪುಟಕ್ಕೆ*

## ಪ್ರಗತಿ ಪರಿಶೀಲನಾ ಸಭೆಯಲ್ಲಿ ಡಿಸಿಎಂ ಡಿಕೆಶಿ, ತಿಮ್ಮಾಪುರ್ ನಡುವೆ ಜಟಾಪಟಿ



**ಬೆಂಗಳೂರು, ಸೆ.3–** ಕೃಷ್ಣಾ ಮೇಲ್ದಂಡೆ ಯೋಜನೆಯ ಮೂರನೇ ಹಂತದ ಕಾಮಗಾರಿಗಳಿಗೆ ಸಂಬಂಧಪಟ್ಟಂತೆ ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಅಬಕಾರಿ ಸಚಿವ ಆರ್.ಬಿ. ತಿಮಾಪುರ ನಡುವೆ ಜಟಾಪಟಿ ನಡೆದಿದೆ.


ಕೃಷ್ಣಾ ಮೇಲ್ದಂಡೆ ಯೋಜನೆ 3ನೇ ಹಂತದ ಅನುಷ್ಠಾನಕ್ಕೆ ಸಂಬಂಧಪಟ್ಟಂತೆ ಭೂಸ್ವಾಧೀನ, ಪುನರ್ ವಸತಿ, ಪುನರ್ ನಿರ್ಮಾಣ, ಭೂ ಪರಿಹಾರ, ವಿವಿಧ ನ್ಯಾಯಾಲಯಗಳಲ್ಲಿ ಹೆಚ್ಚುವರಿ ಪರಿಹಾರ ಕೋರಿ ದಾಖಲಿಸಿರುವ ಪ್ರಕರಣಗಳ ಕುರಿತು ಜಲ ಸಂಪನೂಲ ಸಚಿವರೂ ಆಗಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕಮಾರ್ ಸಭೆ ಕರೆದಿದ್ದರು. ಸಚಿವರಾದ ಪ್ರಿಯಾಂಕ ಖರ್ಗೆ, ಎನ್.ಎಸ್.ಬೋಸ್‌ರಾಜ್, ಶಿವಾನಂದ ಪಾಟೀಲ್, ಆರ್.ಬಿ. ತಿಮಾಪುರ್, ಶರಣ ಬಸಪ್ಪ ದರ್ಶನಾಪೂರ್, ಡಿ.ಸುಧಾಕರ್ ಮತ್ತಿತರರು ಸಭೆಯಲ್ಲಿ ಭಾಗವಹಿಸಿದ್ದರು.

ಪ್ರತಿ ಎಕರೆಗೆ 40 ರಿಂದ 50 ಲಕ್ಷ ರೂ. ಗಳ ಭೂ ಪರಿಹಾರ ನೀಡಬೇಕೆಂದು ಸಭೆಯಲ್ಲಿ ಆರ್.ಬಿ.ತಿಮಾಪುರ್ ಆಗ್ರಹಿಸಿದ್ದರು. ಇದರಿಂದ ಸಿಟ್ಟಾದ ಡಿ.ಕೆ.ಶಿವಕಮಾರ್, ಮಿಸ್ಟರ್ ಮಿನಿಸ್ಟರ್ ಸಂಪುಟದ ಸಚಿವರಾಗಿ ನೀವು ಈ ರೀತಿ ಮಾತನಾಡುವುದು ಸರಿಯಲ್ಲ. ಈ ಹಿಂದೆ ಜಲಸಂಪನೂಲ ಸಚಿವರು ಮತ್ತು ಮುಖ್ಯಮಂತ್ರಿಯಾಗಿದ್ದ ಬಸವರಾಜ್ ಬೊಮಾಯಿ ಅವರು ಭೂ ಪರಿಹಾರಕ್ಕೆ ಒಂದು ದರ ನಿಗದಿ ಪಡಿಸಿದ್ದಾರೆ. ಈಗ ಸಚಿವರಾಗಿರುವ ನಿಮಗೆ ಗೌರವ ಸಿಗಬೇಕು ಎಂಬ ಕಾರಣಕ್ಕೆ ಅದರ ಮೇಲೆ ಒಂದಿಷ್ಟು ಹೆಚ್ಚಳ ಮಾಡಿ ಪರಿಹಾರ ನೀಡಬಹುದು. ನೀನು ಹೇಳಿದಂತೆ 40 ರಿಂದ 50ಲಕ್ಷ ರೂ.ಗಳವರೆಗೂ ನೀಡಲು ಸಾಧ್ಯವಿಲ್ಲ ಎಂದು ಖಡಕ್ಕಾಗಿ ಹೇಳಿದ್ದಾರೆ.

ಜನರ ಅಭಿಪ್ರಾಯಗಳನ್ನು ನಿಮ ಗಮನಕ್ಕೆ ತರುವುದು ನನ್ನ ಜವಾಬ್ದಾರಿ. ಆ ಕೆಲಸ ಮಾಡಿದ್ದೇನೆ. ನಿಮ ಅನುಭವ ಹಾಗೂ ಅವಕಾಶದಲ್ಲಿ ನಿರ್ಧಾರ ತೆಗೆದುಕೊಳ್ಳಿ ಎಂದು ತಿಮಾಪುರ್ ಅಸಮಾಧಾನದಿಂದಲೇ ಪ್ರತಿಕ್ರಿಯಿಸಿದ್ದಾರೆ.ಶಾಸಕರು, ರೈತ ಮುಖಂಡರುಗಳು ಮಾತನಾಡಲಿ. ಇಂತಹ ವೇದಿಕೆಯಲ್ಲಿ ನೀವು ಸಚಿವರಾಗಿ ಈ ರೀತಿ ಮಾತನಾಡಬಾರದು ಎಂದು ಡಿ.ಕೆ.ಶಿವಕುಮಾರ್ **(2ನೇ ಘುಟಕ್ಕೆ)**

## ಜಮಾತೆ ಇಸ್ಲಾಮಿ ಹಿಂದ್ ವತಿಯಿಂದ ಸೀರತ್ ಅಭಿಯಾನ: ಅಬ್ದುಲ್ ರೆಹಮಾನ್

**ಯುವ ಮಾರ್ಗ ಸುದ್ದಿ**




**ಮಾನ್ವಿ,ಸೆ.03–**ಪಟ್ಟಣದ ಜಮಾಅತೆ ಇಸ್ಲಾಮಿ ಹಿಂದ್ ಮಾನ್ವಿ ಘಟಕದ ವತಿಯಿಂದ 'ನ್ಯಾಯದ ಹರಿಕಾರ ಪೈಗಂಬರ್ ಮುಹಮ್ಮದ್ (ಸ)' ಎಂಬ ಶೀರ್ಷಿಕೆಯಡಿ ಸೀರತ್ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಮಾಅತೆ ಇಸ್ಲಾಮಿ ಹಿಂದ್ ಮಾನ್ವಿ ಘಟಕದ ಅಧ್ಯಕ್ಷ ಅಬ್ದುಲ್ ರೆಹಮಾನ್ ಅವರು ತಿಳಿಸಿದ್ದಾರೆ.

ಕುಬಾ ಮಸೀದಿ ಸಭಾಂಗಣದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕುರ್‌ಆನ್‌ನಲ್ಲಿ ತಿಳಿಸಿರುವಂತೆ ಪೈಗಂಬರರು ಸಕಲ ಮಾನವರಿಗೆ ಸುವಾರ್ತೆಯನ್ನು ನೀಡುವವರಾಗಿದ್ದಾರೆ ಮತ್ತು ಎಚ್ಚರಿಕೆಯನ್ನು ನೀಡುವವರಾಗಿದ್ದಾರೆ. ಆದರೆ, ಹೆಚ್ಚಿನ ಜನರಿಗೆ ಪೈಗಂಬರ್ ಮುಹಮ್ಮದ್ (ಸ) ರವರ ಜೀವನ ಮತ್ತು ಸಂದೇಶಗಳ ಕುರಿತು ತಿಳಿದಿಲ್ಲ. ಈ ನಿಟ್ಟಿನಲ್ಲಿ ಎಲ್ಲರಿಗೂ ಅವರ ಕುರಿತು ತಿಳಿಸುವ ಉದ್ದೇಶದಿಂದ ಈ ಅಭಿಯಾ ನವನ್ನು ಆಯೋಜಿಸಲಾಗಿದೆ ಎಂದು ಹೇಳಿದರು.

ಪಟ್ಟಣದ ಈದ್ಗಾ ಫಂಕ್ಷನ್ ಹಾಲ್‌ನಲ್ಲಿ ಸಂಜೆ 7:15ಕ್ಕೆ ವಿಚಾರಗೋಷ್ಠಿ ನಡೆಯಲಿದೆ. ರಾಜ್ಯ ಜಮಾಅತೆ ಇಸ್ಲಾಮಿ ಹಿಂದ್ ಕಾರ್ಯದರ್ಶಿ ಅಕ್ಬರ್ ಅಲಿ ಉಡುಪಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಸುದ್ದಿಮೂಲ ದಿನಪತ್ರಿಕೆಯ ಹಿರಿಯ ಸಂಪಾದಕ ಬಸವರಾಜ ಸ್ವಾಮಿ, ಸರ್ಕಾರಿ ನೌಕರರ ಸಂಘದ ತಾಲ್ಲೂಕು ಅಧ್ಯಕ್ಷ ಸುರೇಶ ಕುರ್ಡಿ, ಸಾವಿತ್ರಿಬಾಯಿ ಫುಲೆ ಮಹಿಳಾ ಸಂಘದ ಅಧ್ಯಕ್ಷೆ ಮಂಜುಳಾ ಹಿರೇಮಠ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಸೆಪ್ಟೆಂಬರ್ 14ರಂದು 11ರಿಂದ ಪಟ್ಟಣದ ಆರೋಗ್ಯ ಆಸ್ಪತ್ರೆಯಲ್ಲಿ ರಕ್ತದಾನ ಶಿಬಿರವನ್ನು ಆಯೋಜಿಸಲಾಗಿದೆ. ವೃದ್ಧಾಶ್ರಮಗಳಿಗೆ ಭೇಟಿ, ಶಾಲೆ–**(2ನೇಪುಟಕ್ಕೆ)**

## ಆರ್‌ಹೆಚ್ ಕ್ಯಾಂಪ್‌ನಲ್ಲಿ ಬಾಲ್ಯವಿವಾಹ ನಿಷೇಧ ಕಾಯ್ದೆಯ ಜಾಗೃತಿ ಕಾರ್ಯಕ್ರಮ

**ಯುವ ಮಾರ್ಗ ಸುದ್ದಿ**



**ರಾಯಚೂರು,ಸೆ.3–**ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಸಾರ್ವಜನಿಕ ಶಿಕ್ಷಣ ಇಲಾಖೆ, ಜಿಲ್ಲಾ ಮಹಿಳಾ ಸಬಲೀಕರಣ ಘಟಕ ರಾಯಚೂರು ವತಿಯಿಂದ ಬಾಲ್ಯ ವಿವಾಹ ನಿಷೇಧ ಕಾಯ್ದೆಯ ಜಾಗೃತಿ ಕಾರ್ಯಕ್ರಮವು ಸಿಂಧನೂರು ತಾಲೂಕಿನ ಆರ್‌ಹೆಚ್ ಕ್ಯಾಂಪ್‌ನ ಸರಕಾರಿ ಪ್ರೌಢಶಾಲೆಯಲ್ಲಿ ಇತ್ತೀಚೆಗೆ ನಡೆಯಿತು.

ಈ ವೇಳೆ ಮಿಷನ್ ಶಕ್ತಿ ಯೋಜನೆಯ ಜಿಲ್ಲಾ ಸಂಯೋಜಕರಾದ ಬಾವಸಲಿ ಅವರು ಮಾತನಾಡಿ, ಬಾಲ್ಯ ವಿವಾಹವು ಸಾಮಾಜಿಕ ಪಿಡುಗಾಗಿ ಪರಿಣಮಿಸಿದೆ. ಸದೃಢ ಸಮಾಜ ನಿರ್ಮಾಣ ಮಾಡಲು ಬಾಲ್ಯವಿವಾಹದಂತಹ ಅನಿಷ್ಠ ಪದ್ಧತಿಯನ್ನು ಹೋಗಲಾಡಿಸಬೇಕು. ಎಲ್ಲಾ ವಿದ್ಯಾರ್ಥಿಗಳು, ಬಾಲ್ಯವಿವಾಹ ಪದ್ಧತಿ ವಿರುದ್ಧ ಹೋರಾಡಬೇಕು ಎಂದು ಸಲಹೆ ಮಾಡಿದರು.

ಬಾಲ್ಯವಿವಾಹ ಮತ್ತು ಬಾಲಕಾರ್ಮಿಕ ಪದ್ಧತಿಗಳ ಬಗ್ಗೆ ವ್ಯಾಪಕ**(2ನೇಪುಟಕ್ಕೆ)**

# ಮೊದಲನೇಯ ಪುಟದಿಂದ

## ಸಾಹಸಸಿಂಹ ಡಾ.ವಿಷ್ಣುವರ್ಧನ್‌ಗೆ ಕರ್ನಾಟಕ ರತ್ನ ಸಾಧ್ಯತೆ..?

ಪುಣ್ಯಭೂಮಿಯಲ್ಲಿ ನಿರ್ಮಿಸಲಾಗಿದ್ದ ಸಾರಕವನ್ನು ರಾತ್ರೋರಾತ್ರಿ ಕೆಲವರು ನೆಲಸಮಗೊಳಿಸಿದ್ದರು. ಇದು ವಿಷ್ಣುವರ್ಧನ್ ಅಭಿಮಾನಿಗಳಲ್ಲಿ ವ್ಯಾಪಕ ಆಕ್ರೋಶವನ್ನು ಹುಟ್ಟಿಸಿತ್ತು.

ಅನಂತರದ ಬೆಳವಣಿಗೆಯಲ್ಲಿ ಈ ಹಿಂದೆ ಅಭಿಮಾನ್ ಸ್ಟುಡಿಯೋ ನಿರ್ಮಾಣಕ್ಕಾಗಿ ಸರ್ಕಾರ ಹಿರಿಯ ನಟ ಬಾಲಕೃಷ್ಣ ಅವರಿಗೆ 20 ಎಕರೆ ಭೂಮಿಯನ್ನು ನೀಡಿತ್ತು. ಆದರೆ ಸ್ಟುಡಿಯೋ ನಿರ್ಮಾಣದ ಉದ್ದೇಶ ಸಾಕಾರಗೊಂಡಿಲ್ಲ ಬದಲಾಗಿ, ಬಾಲಣ್ಣ ಅವರ ನಂತರ ಕುಟುಂಬದ ಸದಸ್ಯರು ಸದರಿ ಭೂಮಿಯನ್ನು ರಿಯಲ್ ಎಸ್ಟೆ?ಟ್ ವ್ಯವಹಾರಕ್ಕೆ ಪರಭಾರೆ ಮಾಡುತ್ತಿದ್ದಾರೆ ಎಂಬ ಆರೋಪಗಳಿವೆ. ಭೂಮಿ ಅರಣ್ಯ ಇಲಾಖೆಗೆ ಸೇರಿದ್ದಾಗಿದ್ದು, ಕೂಡಲೇ ಸರ್ಕಾರದ ವಶಕ್ಕೆ ತೆಗೆದುಕೊಳ್ಳುವಂತೆ ಅರಣ್ಯ ಇಲಾಖೆ ಹಿರಿಯ ಅಧಿಕಾರಿ, ಬೆಂಗಳೂರು ಜಿಲ್ಲಾಧಿಕಾರಿಗಳಿಗೆ ಪತ್ರ ಬರೆದಿದ್ದಾರೆ. ಸರ್ಕಾರದ ವಶಕ್ಕೆ ತೆಗೆದುಕೊಳ್ಳುವ ಭೂಮಿಯಲ್ಲಿ 10 ಗುಂಟೆಯನ್ನು ವಿಷ್ಣುವರ್ಧನ್ ಸಾರಕಕ್ಕೆ ಮೀಸಲಿಡುವಂತೆ ಭಾರತಿವಿಷ್ಣುವರ್ಧನ್ ಮತ್ತು ಅನಿರುದ್ಧ ಅವರು ಮುಖ್ಯಮಂತ್ರಿ ಅವರಿಗೆ ಮನವಿ ಮಾಡಿದ್ದಾರೆ. ವಿಷ್ಣುವರ್ಧನ್ ಅವರ ಸಾರಕಕ್ಕಾಗಿ ಈಗಾಗಲೇ ಮೈಸೂರಿನಲ್ಲಿ ಜಮೀನು ಮೀಸಲಿಡಲಾಗಿದೆ. ಬೆಂಗಳೂರಿನಲ್ಲೂ ಸಾರಕ ನಿರ್ಮಿಸುವುದರಿಂದ ಗೊಂದಲಗಳಾಗಬಹುದು ಎಂಬ ಚರ್ಚೆಗಳಿವೆ.

ಜೊತೆಗೆ ಇದೇ ತಿಂಗಳ 18ರಂದು ವಿಷ್ಣುವರ್ಧನ್ ಅವರ ಜನ ದಿನಾಚರಣೆಯಿದ್ದು, ಆ ವೇಳೆಗೆ ಅವರಿಗೆ ಕರ್ನಾಟಕ ರತ್ನ ಪ್ರಶಸ್ತಿ ನೀಡುವಂತೆ ಹಿರಿಯ ನಟಿಯರಾದ ಜಯಮಾಲ, ಮಾಳವಿಕ ಅವಿನಾಶ್, ಶೃತಿ ನಿನ್ನೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದರು.

ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಈ ಬಗ್ಗೆ ಚರ್ಚಿಸಿ ನಿರ್ಧರಿಸುವುದಾಗಿ ಸಿದ್ದರಾಮಯ್ಯ ಭರವಸೆ ನೀಡಿದ್ದರು. ವಿಷ್ಣುವರ್ಧನ್ ಅವರಿಗೆ ಕರ್ನಾಟಕ ರತ್ನ ನೀಡುವ ನಿಟ್ಟಿನಲ್ಲಿ ಭಾರತಿವಿಷ್ಣುವರ್ಧನ್ ಮುಖ್ಯಮಂತ್ರಿ ಅವರ ಜೊತೆ ಚರ್ಚೆ ಮಾಡಿದ್ದಾರೆ ಎಂದು ಮೂಲಗಳು ತಿಳಿಸಿವೆ. ಮುಖ್ಯಮಂತ್ರಿ ಅವರನ್ನು ಭೇಟಿಯಾದ ಬಳಿಕ ಸುದ್ದಿಗಾರರೊಂದಿಂಗೆ ಮಾತನಾಡಿದ ಭಾರತಿವಿಷ್ಣುವರ್ಧನ್, ಅಭಿಮಾನಿಗಳಿಗಾಗಿ ಅಭಿಮಾನ್ ಸ್ಟುಡಿಯೋದಲ್ಲಿ ವಿಷ್ಣುವರ್ಧನ್ ರವರ ಸಾರಕಕ್ಕೆ ಜಾಗ ಕೇಳಿದ್ದೇವೆ. ಅದಕ್ಕೆ ಮುಖ್ಯಮಂತ್ರಿಯವರು ಸಕಾರಾತಕವಾಗಿ ಸ್ಪಂದಿಸಿದ್ದಾರೆ ಅವರಿಗೆ ಧನ್ಯವಾದಗಳು ಎಂದು ಹೇಳಿದರು.

ವಿಷ್ಣುವರ್ಧನ್ ಅವರಿಗೆ ಕರ್ನಾಟಕ ರತ್ನ ಕೊಡಿ ಎಂದು ನಾನು ಕೇಳಲ್ಲ. ಆದರೆ ಅಭಿಮಾನಿಗಳು ಕೇಳುತ್ತಿದ್ದಾರೆ. ಅವರಿಗಾಗಿ ಕರ್ನಾಟಕ ರತ್ನ ಕೊಡಬೇಕಿದೆ.ಇದೇ 18ರಂದು ವಿಷ್ಣುರವರ ಹುಟ್ಟು ಹಬ್ಬವಿದ್ದು, ಆ ವೇಳೆಗೆ ಸಾರಕದ ಜಾಗಕ್ಕೆ ಅನುಮತಿ ನೀಡಬೇಕೆಂದು ಮನವಿ ಮಾಡಿದ್ದಾರೆ.ಇದೇ ವೇಳೆ ಮಾತನಾಡಿದ ನಟ ಅನಿರುದ್ಧ, ಅಭಿಮಾನ್ ಸ್ಟುಡಿಯೋ ದಲ್ಲಿರುವ ಹತ್ತು ಗುಂಟೆ ಜಾಗಕ್ಕಾಗಿ ಮನವಿ ಮಾಡಿದ್ದೇವೆ. ಆ ಜಾಗದಲ್ಲಿ ಮಂಟಪ ನಿರ್ಮಿಸಲು ಅನುಮತಿ ಕೊಡಿ ಎಂದು ಕೇಳಿರುವುದಾಗಿ ಹೇಳಿದರು.

ಹಿಂದೆ ಅಲ್ಲಿ ನಾವೇ ಮಂಟಪವನ್ನು ನಾವೇ ಮಂಟಪವನ್ನು ನಿರ್ಮಾಣ ಮಾಡಿದ್ದೆವು. ಈಗಲೂ ಜಾಗ ಕೊಟ್ಟರೆ ನಾವೇ ಮಂಟಪ ಕಟ್ಟಿಕೊಳ್ಳುತ್ತೇವೆ. ಅರಣ್ಯ ಇಲಾಖೆಯ ಹಿರಿಯ ಅಧಿಕಾರಿ ಅಂಜುಮ್ ಪರ್ವೇಜ್ ಜೊತೆಗೂ ಮುಖ್ಯಮಂತ್ರಿ ಮಾತನ್ನಾಡಿದ್ದಾರೆ. ಅವರು ಕೂಡ ಸಕಾರಾತಕ ವಾಗಿ ಸ್ಪಂದಿಸಿದ್ದಾರೆ. ಸೆಪ್ಟೆಂಬರ್ 18ರೊಳಗೆ ಜಾಗಕ್ಕೆ ಅನುಮತಿ ಸಿಗಬಹುದು. ನಾಳೆಯ ಸಚಿವ ಸಂಪುಟಸಭೆಯಲ್ಲಿ ಕರ್ನಾಟಕ ರತ್ನದ ಬಗ್ಗೆ ಸಿಎಂ ಚರ್ಚೆ ಮಾಡುವುದಾಗಿ ಹೇಳಿದ್ದು, ಬಹುತೇಕ ಕರ್ನಾಟಕ ರತ್ನ ಘೋಷಣೆ ಯಾಗುವ ಸಾಧ್ಯತೆ ಇದೆ ಎಂದರು. ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್, ಶಾಸಕ ಕೆ.ವೈ.ನಂಜೇಗೌಡ ಮುಂತಾದವರು ಇದ್ದರು.

## ಪಹಲ್ಗಾಮ್ ದಾಳಿಕೋರರಿಗೆ ವಿದೇಶಿ ಹಣ

ಜಮ್ಮು-ಕಾಶ್ಮೀರದ ಪಹಲ್ಗಾಮ್ ದಾಳಿಯ ನಂತರ ಎನ್‌ಐಎ ತನಿಖೆ ನಡೆಸಿದ ಸಂದರ್ಭದಲ್ಲಿ ವಿದೇಶದಿಂದ ಟಿಆರ್‌ಎಫ್‌ಗೆ ಹಣ ಬಂದಿರುವುದು ದೃಢಪಟ್ಟಿದೆ.ಲಕ್ಷರ್-ಇ-ತೊಯ್ಬಾ ಉಗ್ರ ಸಾಜಿತ್ ಮಿರ್‌ನ ಮೊಬೈಲ್ ಡೇಟಾ ಸಾಮಾಜಿಕ ಜಾಲತಾಣಗಳಲ್ಲಿ,ಚಾಟ್ಸ್ ಬ್ಯಾಂಕ್ ವ್ಯವಹಾರವನ್ನು ಎನ್‌ಐಎ ಪರಿಶೀಲಿಸಿ ಟಿಆರ್‌ಎಫ್‌ಗೆ ವಿದೇಶಿ ಹಣ ಬಂದಿರುವುದನ್ನು ಖಚಿತಪಡಿಸಿದೆ.

ಪಹಲ್ಗಾಮ್ ದಾಳಿಯ ನಂತರ ಪಾಕಿಸ್ತಾನ ಮೂಲದ ಲಕ್ಷರ್-ಇ-ತೊಯ್ಬಾ ಈ ದಾಳಿಯ ಹಿಂದೆ ಇತ್ತು. ಈ ದಾಳಿಗೆ ಹಣದ ನೆರವನ್ನು ಒದಗಿಸಿತ್ತು ಎಂಬ ಸುಳಿವು ಹಿಡಿದು ಎನ್‌ಐಎ ಈಗ ಮಹತ್ವದ ವಿದೇಶಿ ಹಣ ಹರಿವಿನ ಮೂಲವನ್ನು ಪತ್ತೆ ಹಚ್ಚಿದೆ.

## ಪ್ರಗತಿ ಪರಿಶೀಲನಾ ಸಭೆಯಲ್ಲಿ ಡಿಸಿಎಂ ಡಿಕೆಶಿ, ತಿಮ್ಮಾಪುರ್ ನಡುವೆ ಜಟಾಪಟಿ

ಗರಂ ಆಗಿದ್ದಾರೆ. ಮಾಧ್ಯಮಗಳ ಮುಂದೆ ಈ ಮಾತುಕತೆ ನಡೆಯುತ್ತಿತ್ತು. ಜಟಾಪಟಿ ಬಹಿರಂಗಗೊಂಡು ಸಾರ್ವಜನಿಕರಲ್ಲಿ ತಪ್ಪು ಅಭಿಪ್ರಾಯ ಸೃಷ್ಟಿಯಾಗಬಾರದು ಎಂಬ ಕಾರಣಕ್ಕಾಗಿ ಸಚಿವ ಪ್ರಿಯಾಂಕ ಖರ್ಗೆ ಮಾಧ್ಯಮಗಳ ಕ್ಯಾಮೆರಾಮನ್‌ಗಳನ್ನು ಹೊರಗೆ ಕಳುಹಿಸಲು ಪ್ರಯತ್ನಿಸಿದರು. ಇದಕ್ಕೂ ಅವಕಾಶ ನೀಡದ ಡಿ.ಕೆ.ಶಿವಕುಮಾರ್ ಮಾಧ್ಯಮಗಳು ಇರಲಿ ಎಂದು ಹೇಳಿ ಅವರು ಮಾತನಾಡಲಿ ಎಂದು ಶಾಸಕರಿಗೆ ಅವಕಾಶ ಮಾಡಿಕೊಟ್ಟರು.

ಕೃಷ್ಣಾ ಮೇಲ್ದಂಡೆ 3ನೇ ಹಂತದ ಯೋಜನಾ ವೆಚ್ಚ ದಿನದಿಂದ ದಿನಕ್ಕೆ ಏರಿಕೆಯಾಗುತ್ತಲೇ ಇದೆ. ಇತ್ತೀ?ಚಿನ ವರದಿಗಳ ಪ್ರಕಾರ ಯೋಜನಾ ವೆಚ್ಚ 75 ಸಾವಿರ ಕೋಟಿಯಿಂದ ಒಂದು ಲಕ್ಷ ಕೋಟಿಗೂ ಮಿಗಿಲಾಗಿ ಹೆಚ್ಚಳವಾಗಿದೆ. ಯೋಜನೆಯನ್ನು ಅನುಷ್ಠಾನಕ್ಕೆ ತಂದು ಪೂರ್ಣಗೊಳಿಸುವುದಾಗಿ ಎಲ್ಲಾ ಸರ್ಕಾರಗಳು ಭರವಸೆ ನೀಡುತ್ತಲೇ ಬಂದಿವೆ.

ಆದರೆ ಭೂಸ್ವಾಧೀನದ ಖರ್ಚುವೆಚ್ಚಗಳು ದುಬಾರಿಯಾಗಿರುವ ಕಾರಣಕ್ಕೆ ಯೋಜನೆ ಆರಂಭಿಕ ಹಂತದಲ್ಲೆ? ಇದೆ. ಯೋಜನೆಗೆ ತಾರ್ಕಿಕ ಅಂತ್ಯ ಕಾಣಿಸಬೇಕು ಎಂಬ ಕಾರಣಕ್ಕೆ ಡಿ.ಕೆ.ಶಿವಕುಮಾರ್ ಅವರು ಮಹತ್ವದ ಸಭೆ ನಡೆಸಿದ್ದರು. ಸಭೆಯಲ್ಲಿ ಪರಿಹಾರ ಹೆಚ್ಚಳದ ಬಗ್ಗೆ ಪ್ರತಿಪಾದಿಸಿದ ಕಾರಣಕ್ಕೆ ಸಚಿವ ತಿಮಾಪುರ್ ಅವರು ಡಿ.ಕೆ.ಶಿವಕುಮಾರ್ ಅವರ ಕೆಂಗಣ್ಣಿಗೆ ಗುರಿಯಾಗಿದ್ದಾರೆ.

## ಜಮಾತೆ ಇಸ್ಲಾಮಿ ಹಿಂದ್ ವತಿಯಿಂದ ಸೀರತ್ ಅಭಿಯಾನ: ಅಬ್ದುಲ್ ರೆಹಮಾನ್

ಕಾಲೇಜುಗಳಲ್ಲಿ ಅಭಿಯಾನದ ಕುರಿತು ಉಪನ್ಯಾಸಗಳು ಹಾಗೂ ವಿವಿಧ ಸಾಮಾಜಿಕ, ಶೈಕ್ಷಣಿಕ, ರಾಜಕೀಯ ಮತ್ತು ಧಾರ್ಮಿಕ ಮುಖಂಡರೊಂದಿಗೆ ವೈಯಕ್ತಿಕ ಮತ್ತು ಸಾಮೂಹಿಕ ಭೇಟಿಗಳನ್ನು ಸಹ ಹಮ್ಮಿಕೊಳ್ಳಲಾಗಿದೆ ಎಂದರು.

ಈ ಸಂದರ್ಭದಲ್ಲಿ ರಾಬ್ತೆ ಮಿಲ್ಲತ್, ಜ.ಇ.ಹಿ. ಮಾನ್ವಿ ಘಟಕದ ಅಧ್ಯಕ್ಷ ಸೈಯದ್ ಅಕ್ಬರ್ ಸಾಬ್ ಅವರು 'ನ್ಯಾಯದ ಹರಿಕಾರ ಪೈಗಂಬರ್ ಮುಹಮ್ಮದ್ (ಸ)' ಅಭಿಯಾನದ ಭಿತ್ತಿಪತ್ರಗಳನ್ನು ಬಿಡುಗಡೆ ಮಾಡಲಾಯಿತು.

ಈ ಸಂದರ್ಭದಲ್ಲಿ ಜಮಾಅತೆ ಇಸ್ಲಾಮಿ ಹಿಂದ್ ತಾಲ್ಲೂಕು ಪ್ರಧಾನ ಕಾರ್ಯದರ್ಶಿ ಸಬ್ಜಲಿ ಸಾಬ್, ಅಭಿಯಾನದ ಸಂಚಾಲಕ ಎಂ.ಎ.ಎಚ್. ಮುಖೀಮ್, ಮಾಧ್ಯಮ ಕಾರ್ಯದರ್ಶಿ ಉಮರ್ ಫಾರೂಕ್ ದೇವರಮನಿ ಮತ್ತು ಬಾಷಾ ಚಿಮಲಪುರ್ ಉಪಸ್ಥಿತರಿದ್ದರು.

## ಆರ್‌ಹೆಚ್ ಕ್ಯಾಂಪ್‌ನಲ್ಲಿ ಬಾಲ್ಯವಿವಾಹ ನಿಷೇಧ ಕಾಯ್ದೆಯ ಜಾಗೃತಿ ಕಾರ್ಯಕ್ರಮ

ವಿರೋಧ ವ್ಯಕ್ತವಾಗಬೇಕು. ವಿದ್ಯಾರ್ಥಿಗಳಿಗೆ ಈ ಬಗ್ಗೆ ಅರಿವು ಮೂಡಿಸಬೇಕು. ಉತ್ತಮ ಶಿಕ್ಷಣ ಪಡೆದು ಉಜ್ವಲ ಭವಿಷ್ಯ ನಿರ್ಮಾಣ ಮಾಡಿಕೊಳ್ಳಲು ವಿದ್ಯಾರ್ಥಿಗಳಿಗೆ ತಿಳಿಸಬೇಕು. ಬಾಲ್ಯ ವಿವಾಹ 2006ರ ಕಾಯ್ದೆಯ ಪ್ರಕಾರ ಬಾಲ್ಯವಿವಾಹವನ್ನು ಪ್ರೋತ್ಸಾಹಿಸಿದವರಿಗೆ ಕಠಿಣ ಶಿಕ್ಷೆ ಇದೆ. ಸಾರ್ವಜನಿಕರು, ವಿದ್ಯಾರ್ಥಿಗಳು ಇಂತಹ ಅನಿಷ್ಠ ಪದ್ದತಿಯಿಂದ ದೂರವಿರಬೇಕು. ಸದೃಢ ಸಮಾಜ ನಿರ್ಮಾಣ ಮಾಡುವ ದಿಟ್ಟಹೆಜ್ಜೆ ಇಡಬೇಕು. ಬಾಲ್ಯವಿವಾಹ, ಬಾಲಕಾರ್ಮಿಕತೆಯ ಘಟನೆಗಳು ಕಂಡುಬಂದಲ್ಲಿ ಕೂಡಲೆ ಮಕ್ಕಳ ಸಹಾಯವಾಣಿ 1098ಗೆ ಕರೆ ಮಾಡಿ ದೂರು ನೀಡುವಂತೆ ತಿಳಿಸಿದರು.

ಇದೇ ಸಂದರ್ಭದಲ್ಲಿ ಆರ್‌ಹೆಚ್ ಕ್ಯಾಂಪ್‌ನ ಸರಕಾರಿ ಪ್ರೌಢಶಾಲೆಯ ಮುಖ್ಯಗುರುಗಳಾದ ವೀಣಾ ಹಕ್ಕಲ್, ಮಕ್ಕಳ ಸಹಾಯವಾಣಿ ಅಧಿಕಾರಿ ಮುಕ್ಕಣ್ಣ, ಶಾಲೆಯ ಸಹ ಶಿಕ್ಷಕರಾದ ವೀರೇಶ್, ರವಿ, ಜಂಬಯ್ಯ ಸ್ವಾಮಿ, ಬಸಬಲಿಂಗಪ್ಪ, ಮಲ್ಲಪ್ಪ, ಸುರೇಶ್ ಸೇರಿದಂತೆ ಶಾಲೆಯ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿದ್ದರು.

**ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ**

**9743497111 9743496111**

## ಬೆಳೆ ಹಾನಿ ಪರಿಹಾರಕ್ಕೆ ಆಗ್ರಹಿಸಿ ವೀರ ಕನ್ನಡಿಗರ ಸೇನೆ ಪ್ರತಿಭಟನೆ



**ಕಲಬುರಗಿ,ಸೆ.3–** ಜಿಲ್ಲೆಯಲ್ಲಿ ಅಕಾಲಿಕ ಮಳೆಯಿಂದಾಗಿ ಅತಿವೃಷ್ಟಿಯ ಹಾನಿ ಸಂಭಿವಿಸಿದ್ದು, ಸಂಕಷ್ಟಕ್ಕೆ ಸಿಲುಕಿರುವ ರೈತರಿಗೆ ಸೂಕ್ತ ಪರಿಹಾರ ನೀಡುವಂತೆ ವೀರ ಕನ್ನಡಿಗರ ಸೇನೆ ಪ್ರತಿಭಟನೆಯ ಮೂಲಕ ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿದೆ.

ಬಿತ್ತನೆ ಮಾಡಿದ ಬೆಳೆಗಳಾದ ಹೆಸರು, ಉದ್ದು, ಸಜ್ಜೆ, ತೊಗರಿ ಅತಿವೃಷ್ಟಿಯಿಂದ ಕೊಳೆತು ಹೋಗಿವೆ, ಸಾಲ ಸುಲಮಾಡಿ ಬಿತ್ತನ ಮಾಡಿರುವ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದು, ಇವರ ನೆರವಿಗೆ ಸರ್ಕಾರಕ ಮುಂದಾಗಬೇಕು ಎಂದು ಸೇನೆಯ ಸಂಸ್ಥಾಪಕ ಅಧ್ಯಕ್ಷ ಅಮೃತ್ ಸಿ.ಪಾಟೀಲ ಸಿರನೂರ ಅವರು ಒತ್ತಾಯಿಸಿದರು.

ಜಿಲ್ಲೆಯಲ್ಲಿ ಅತಿವೃಷ್ಠಿಯಿಂದ ಹಾನಿಯಾದ ಬೆಳೆಗಳ ಸಮೀಕ್ಷೆ ಕೈಗೊಂಡು ಪ್ರತಿ ಎಕರೆ ಬೆಳೆ ಹಾನಿಗೆ 20 ಸಾವಿರ ಪರಿಹಾರ ಘೋಷಣೆ ಮಾಡುವುದು ಸೇರಿದಂತೆ ಪ್ರಮುಖ ಬೇಡಿಕೆಯ ಮನವಿ ಪತ್ರವನ್ನು ಜಿಲ್ಲಾಡಳಿತದ ಮುಖಾಂತರ ಮುಖ್ಯಮಂತ್ರಿಗಳಿಗೆ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಸೇನೆಯ ಪ್ರಮುಖರಾದ ರವಿ ಒಂಟಿ, ವಿಠಲ ಕುಸಾಳೆ, ಉಮೇಶ ಸಿಂಗೆ, ಸೋಮಶೇಖರ ಗಡಿನಿಂಗದಳ್ಳಿ, ಗೋಪಾಲರಾವ, ಸಚಿನಕುಮಾರ, ಎಂಎಸ್ ಪಾಟೀಲ, ಹಣಮಂತ ಇಂಜಿಹಳ್ಳಿ, ಅಶೋಕ ಬೀರನಳ್ಳಿ, ವಿಠಲ ಇಂಜನಳ್ಳಿ, ಮಲ್ಲಿಕಾರ್ಜುನ ಮಠ, ಶಿವಾನಂದ ಜಿಕ್ಕಾಣಿ, ಪ್ರಶಾಂತ ಬಾಚನಳ್ಳಿ, ಅಣವೀರ ಬಿರಾದಾರ, ಸುಧೀರ ನವನಳ್ಳಿ, ಮಹಾಂತಗೌಡ ಹೂಗಾರ, ಮಂಜುನಾಥ ಲಕ್ಷ್ಮೀಕಾಂತ, ಸಿಮನರಾಜ, ಹಣಮತ ಭಜಂತ್ರಿ, ಉದಯಕಮುಆರ ಶ್ರವಣಕುಮಾರ, ಮಲ್ಲಿನಾಥ ಸೋಮಾ, ಭಾಗಮ್ಮ ಚೌಧರಿ. ಗೌಸಮಿಯಾ, ಆರೀಫ್, ರಜನಿಕಾಂತ, ಅಶೇಕ ಸೇರಿದಂತೆ ಹಲವರು ಭಾಗವಹಿಸಿದ್ದರು.

## ಬಸವೇಶ್ವರ ಆಸ್ಪತ್ರೆಯ ಅತ್ಯಾಧುನಿಕ ತುರ್ತು ನಿಗಾ ಘಟಕ ಉದ್ಘಾಟನೆ 5 ರಂದು



**ಕಲಬುರಗಿ,ಸೆ.3–**ಆರೋಗ್ಯ ಸೇವೆಗಾಗಿ ಹೈದ್ರಾಬಾದ್, ಸೊಲ್ಲಾಪುರ ಹಾಗೂ ಇತರ ನಗರಗಳೆಡೆಗೆ ಸಾಗುತಿದ್ದ ಈ ಭಾಗದ ಜನರಿಗೆ ಕಡಿಮೆ ದರದಲ್ಲಿ ಉತ್ತಮ ಸೇವೆ ನೀಡುವ ಉದ್ದೇಶದಿಂದಲೇ 1986ರಲ್ಲಿ ಪ್ರಾರಂಭವಾದ ಬಸವೇಶ್ವರ ಭೋದನಾ ಮತ್ತು ಸಾರ್ವಜನಿಕ ಆಸ್ಪತ್ರೆಯು ಈ ಭಾಗದಲ್ಲಿಯ ಜನರ ಆರೋಗ್ಯಕರ ಜೀವನಕ್ಕೆ ಬೆನ್ನೆಲುಬಾಗಿ ನಿಲ್ಲುವಲ್ಲಿ ಮಹತ್ವದ ಪಾತ್ರ ವಹಿಸಿದೆ. ಇದೀಗ ಆಧುನಿಕ ತಂತ್ರಜ್ಞಾನದಲ್ಲಿ ನಿರ್ಮಿಸಲಾದ ತುರ್ತು ನಿಗಾ ಘಟಕ ಸಾರ್ವಜನಿಕ ಉಪಯೋಗಕ್ಕೆ ಲಭ್ಯವಾಗುವ ದಿನ ಬಂದಿದೆ ಎಂದು ಹೈದ್ರಾಬಾದ ಕರ್ನಾಟಕ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಹಾಗೂ ವಿಧಾನ ಪರಿಷತ್ ಸದಸ್ಯ ಶಶೀಲ ಜಿ.ನಮೋಶಿ ತಿಳಿಸಿದರು.

ಆಸ್ಪತ್ರೆಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇಂದಿನ ತುರ್ತು ಪರಿಸ್ಥಿತಿಗಳು ಕೇವಲ ಅಪಘಾತಗಳಿಗೆ ಮಾತ್ರ ಸೀಮಿತವಾಗಿಲ್ಲ- ಯುವಕರ ಹೃದಯಾಘಾತ, ಸ್ಟ್ರೋಕ್ಗಳು, ಆತ್ಮಹತ್ಯೆಗಳು ಹಾಗೂ ಉಷ್ಣಾಘಾತಗಳು ಹೆಚ್ಚಾಗಿ ಕಾಣುತ್ತಿದ್ದೇವೆ ಇಂತಹ ಕ್ಷಣಗಳಲ್ಲಿ "ಗೋಲ್ಡನ್ ಅವರ್" ಜೀವ ಉಳಿಯುವುದನ್ನು ನಿರ್ಧರಿಸುತ್ತದೆ. ಬಸವೇಶ್ವರ ಬೋಧನಾ ಹಾಗೂ ಸಾರ್ವಜನಿಕ ಆಸ್ಪತ್ರೆಯು, ಜೀವ ಉಳಿಸುವ ಈ ಕ್ಷಣಗಳಲ್ಲಿ ಸಹಾಯ ಮಾಡುವ ಉದ್ದೇಶದಿಂದ, ಹೈದರಾಬಾದ್-ಕರ್ನಾಟಕದ ಮೊದಲ ಅತ್ಯಾಧುನಿಕ ತುರ್ತು ವೈದ್ಯಕೀಯ ವಿಭಾಗವನ್ನು ಪ್ರಾರಂಭಿಸಲಾಗುತ್ತಿದೆ. ಈ ತುರ್ತು ವೈದ್ಯಕೀಯ ವಿಭಾಗವು 32 ಹಾಸಿಗೆಗಳೊಂದಿಗೆ ವಿಶೇಷ ವ್ಯವಸ್ಥೆಯನ್ನು ಹೊಂದಿದ್ದು, 6 ಹಾಸಿಗೆಗಳ ಪುನರುಜ್ಜೀವನ ( ಶ್ವಾಸಕೋಶ ಪುನರುಜ್ಜೀವನ ) ವಿಭಾಗ, 6 ಹಾಸಿಗೆಗಳ ಐಸಿಯು, 14 ಹಾಸಿಗೆಗಳ ಮಾನಿಟರಿಂಗ್ ವಿಭಾಗ, 6 ಹಾಸಿಗೆಗಳ ಐಸೋಲೇಷನ್ ಐಸಿಯು, ವಿಶೇಷ ತುರ್ತು ಶಸ್ತ್ರಚಿಕಿತ್ಸಾ ವಲಯ, ಹಾಸಿಗೆ ಪಕ್ಕದ ತಪಾಸಣಾ ಸಾಧನಗಳು -2ಡಿ ಇಕೋ, ಹಾಸಿಗೆ ಪಕ್ಕದ ಎಕ್ಸ್-ರೇ ಇವುಗಳೊಂದಿಗೆ, ತುರ್ತು ಹಾಗೂ ಪರಿಣಾಮಕಾರಿ ಚಿಕಿತ್ಸೆಯನ್ನು ಪರಿಚಯಿಸಲಾಗುತ್ತಿದೆ. ಮುಖ್ಯವಾಗಿ, ತುರ್ತು ಚಿಕಿತ್ಸೆ ತರಬೇತಿ ಪಡೆದ ವೈದ್ಯರು ಮತ್ತು ನರ್ಸ್ ತಂಡವು 24/7 ಕೆಲಸಕ್ಕೆ ಸಿದ್ಧರಾಗಿರುತ್ತಾರೆ. ಒಬ್ಬ ರೋಗಿಯನ್ನು ಉಳಿಸುವುದು ಎಂದರೆ ಒಂದು ಕುಟುಂಬವನ್ನು ಉಳಿಸಿದಂತೆ -ಅದೇ ನಮ್ಮ ಧ್ಯೇಯವಾಗಿದೆ ಎಂದು ತಿಳಿಸಿದರು.

ಆಧುನಿಕರಣಗೊಂಡ ತುರ್ತು ನಿಗಾ ಘಟಕವು ಸೆ.5. ರಂದು ಲೋಕಾರ್ಪಣೆಗೊಳ್ಳಲಿದ್ದು, ಘಟಕವನ್ನು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಉದ್ಘಾಟಿಸಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಸ್ಥೆಯ ಅಧ್ಯಕ್ಷರಾದ ಶಶೀಲ್ ಜಿ ನಮೋಶಿ ವಹಿಸಿಕೊಳ್ಳಲಿದ್ದು, ಮುಖ್ಯ ಅತಿಥಿಗಳಾಗಿ ಶಾಸಕರಾದ ಅಲ್ಲಮಪ್ರಭು ಪಾಟೀಲ್, ಕನೀಜ್ ಫಾತೀಮಾ, ಬಸವರಾಜ ಮತ್ತಿಮೂಡ್, ಡಾ.ಅವಿನಾಶ್ ಜಾಧವ್, ವಿಧಾನ ಪರಿಷತ್ ಸದಸ್ಯ ತಿಪ್ಪಣ್ಣ ಕಮಕನೂರ, ಜಗದೇವ ಗುತ್ತೆದಾರ, ಮಾಜಿ ಸಚಿವರಾದ ಸುನೀಲ್ ವಲ್ಯಾಪೂರೆ ಆಗಮಿಸಲಿದ್ದಾರೆ ಎಂದು ತಿಳಿಸಿದರು.

ಸಂಸ್ಥೆಯ ಉಪಾಧ್ಯಕ್ಷರಾದ ರಾಜಾ ಭಿ ಭೀಮಳ್ಳಿ , ಕಾರ್ಯದರ್ಶಿಗಳಾದ ಉದಯಕುಮಾರ್ ಚಿಂಚೋಳಿ, ಜಂಟಿ ಕಾರ್ಯದರ್ಶಿಗಳಾದ ಡಾ ಕೈಲಾಸ ಪಾಟೀಲ್, ಆಡಳಿತ ಮಂಡಳಿ ಸದಸ್ಯರು ಹಾಗೂ ಸಂಚಾಲಕರಾದ ಡಾ.ಕಿರಣ್ ದೇಶಮುಖ್, ಡಾ. ಶರಣಬಸಪ್ಪ ಹರವಾಳ, ಡಾ.ಅನಿಲಕುಮಾರ ಪಟ್ಟಣ,ಡೀನ್ ಡಾ.ಶರಣಗೌಡ ಪಾಟೀಲ್, ವೈಸ್ ಡೀನ್ ಡಾ.ವಿಜಯಕುಮಾರ್ ಕಪ್ಪಿಕೇರಿ, ವೈದ್ಯಕೀಯ ಅಧೀಕ್ಷಕರಾದ ಡಾ.ಮಲ್ಲಿಕಾರ್ಜುನ ತೇಗನೂರ, ಡಾ.ಗುರುಲಿಂಗಪ್ಪ ಪಾಟೀಲ್ ಡೀನ್,ವೈದ್ಯಕೀಯ ನಿರ್ದೇಶಕರಾದ ಡಾ.ಮಲ್ಲಿಕಾರ್ಜುನ ಭಂಡಾರ, ಡಾ.ಉದಯ ಖಾಸಗಿ,ಡಾ. ಸೋಹೈಲ್ ಮಾಧ್ಯಮ ಸಂಯೋಜಕ ಐ.ಕೆ. ಪಾಟೀಲ್ ಸುದ್ದಿಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

## ಕಲ್ಯಾಣ ಕರ್ನಾಟಕ ಉತ್ಸವಕ್ಕೆ ಸಿ.ಎಂ. ಆಗಮನ

**ಕಲಬುರಗಿ,ಸೆ.3–** ಇದೇ ಸೆಪ್ಟೆಂಬರ್ 17 ರಂದು ಜರುಗುವ ಕಲ್ಯಾಣ ಕರ್ನಾಟಕ ಉತ್ಸವದಲ್ಲಿ ಭಾಗವಹಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಸಚಿವರು, ಶಾಸಕರು-ಸಂಸದರು ಹಾಗೂ ಇತರೆ ಚುನಾಯಿತ ಜನಪ್ರತಿನಿಧಿಗಳು ಆಗಮಿಸುವುದರಿಂದ ಕಾರ್ಯಕ್ರಮ ಯಶಸ್ಸಿಗೆ ಅಧಿಕಾರಿಗಳು ಪರಸ್ಪರ ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಹೇಳಿದರು.

ಬುಧವಾರ ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅಧಿಕಾರಿಗಳೊಂದಿಗೆ ಪೂರ್ವಭಾವಿ ಸಭೆ ನಡೆಸಿದ ಅವರು, ಸೆ.17 ರಂದು ಬೆಳಿಗ್ಗೆ ಸರ್ದಾರ್ ವಲ್ಲಭಭಾಯ್ ಪಟೇಲ್ ಪ್ರತಿಮೆಗೆ ಮಾಲಾರ್ಪಣೆ ಮಾಡಲಿರುವ ಮುಖ್ಯಮಂತ್ರಿಗಳು ತದನಂತರ ಪೊಲೀಸ್ ಪರೇಡ್ ಮೈದಾನದಲ್ಲಿ ನಡೆಯುವ ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆಯ ಧ್ವಜಾರೋಹಣ ನೆರವೇರಿಸಿ ಸಾರ್ವಜನಿಕರನ್ನು ಉದ್ದೇಶಿಸಿ ಮಾತನಾಡುವರು ಎಂದು ಮುಖ್ಯಮಂತ್ರಿಗಳ ಪ್ರವಾಸದ ವಿವರ ಹಂಚಿಕೊಂಡರು.

ಶಿಷ್ಠಾಚಾರದಂತೆ ಜಿಲ್ಲೆಯ ಎಲ್ಲಾ ಚುನಾಯಿತ ಜನಪ್ರತಿನಿಧಿಗಳನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಬೇಕು. ಪರೇಡ್ ಮೈದಾನ, ಸರ್ದಾರ್ ವಲ್ಲಭಭಾಯ್ ಪಟೇಲ್ ವೃತ್ತ ಸೇರಿದಂತೆ ಮುಖ್ಯಮಂತ್ರಿಗಳು ಭಾಗವಹಿಸುವ ಕಾರ್ಯಕ್ರಮಗಳಲ್ಲಿ ಸ್ವಚ್ಛತೆ ಕಾಪಾಡಬೇಕು ಮತ್ತು ಪೊಲೀಸ್ ಭದ್ರತೆ ಒದಗಿಸಬೇಕು.



ವಿಶೇಷವಾಗಿ ಕಲಬುರಗಿ ನಗರದ ಪ್ರಮುಖ ವೃತ್ತಗಳನ್ನು ದೀಪಾಲಂಕಾರಗೊಳಿಸಬೇಕು. ಕಾರ್ಯಕ್ರಮ ಯಶಸ್ಸಿಗೆ ವಿವಿಧ ಸಮಿತಿಗಳನ್ನು ರಚಿಸಿ ಅಧಿಕಾರಿಗಳಿಗೆ ಜವಾಬ್ದಾರಿ ನೀಡಿದ್ದು, ಅದರಂತೆ ಅಧಿಕಾರಿಗಳು ಯಾವುದೇ ಕರ್ತವ್ಯ ಲೋಪಕ್ಕೆ ಅವಕಾಶ ನೀಡದೆ ಕಾರ್ಯನಿರ್ವಹಿಸಬೇಕು ಎಂದರು.

ಸೆಪ್ಟೆಂಬರ್ 17ರ ಕಲ್ಯಾಣ ಕರ್ನಾಟಕ ಉತ್ಸವ ಕಾರ್ಯಕ್ರಮದಲ್ಲಿ ಜಿಲ್ಲೆ ಮತ್ತು ಪ್ರದೇಶದ ವಿವಿಧ ಕಾಮಗಾರಿಗಳ ಉದ್ಘಾಟನೆ, ಶಂಕುಸ್ಥಾಪನೆ ಮತ್ತು ಸೌಲಭ್ಯ ವಿತರಣೆ ಕಾರ್ಯಕ್ರಮ ಆಯೋಜಿಸಬೇಕಿದಲ್ಲಿ ಶನಿವಾರದೊಳಗೆ ಪಟ್ಟಿಯನ್ನು ಜಿಲ್ಲಾಡಳಿತಕ್ಕೆ ಸಲ್ಲಿಸಬೇಕು. ಕೊನೆ ಕ್ಷಣದಲ್ಲಿ ಕಾರ್ಯಕ್ರಮ ಸೇರ್ಪಡೆಗೆ ಇಲ್ಲಿ ಅವಕಾಶ ಇಲ್ಲ ಎಂದು ಅಧಿಕಾರಿಗಳಿಗೆ ಅವರು ಸ್ಪಷ್ಟಪಡಿಸಿದರು.

# ವಿದೇಶಿ ನಿಧಿ ತನಿಖೆ ತೀವ್ರ

**ಬೆಂಗಳೂರು,ಸೆ.3–**ಧರ್ಮಸ್ಥಳದ ಬಳಿ ಶವಗಳನ್ನು ಹೂತ ಪ್ರಕರಣದಲ್ಲಿ ಅಕ್ರಮ ವಿದೇಶಿ ನಿಧಿ ಬಳಕೆ ಆರೋಪದ ಸಂಬಂಧ ಜಾರಿ ನಿರ್ದೇಶನಾಲಯ (ಇಡಿ)ದ ಅಧಿಕಾರಿಗಳು ತನಿಖೆಯನ್ನು ತೀವ್ರಗೊಳಿಸಿದ್ದಾರೆ.

ಅಕ್ರಮ ವಿದೇಶಿ ನಿಧಿ ಬಳಕೆ ಆರೋಪದಡಿ ತನಿಖೆಯನ್ನು ತೀವ್ರಗೊಳಿಸಿರುವ ಅಧಿಕಾರಿಗಳು ಕೆಲವರ ಬ್ಯಾಂಕ್ ಖಾತೆಗಳ ಪರಿಶೀಲನೆ ಕೈಗೊಂಡಿದ್ದಾರೆ.ಧರ್ಮಸ್ಥಳದ ಪ್ರಕರಣಕ್ಕೆ ಎರಡು ಎನ್‌ಜಿಒಗಳ ಮೂಲಕ ವಿದೇಶದಿಂದ ಹಣ ಬಂದಿದೆಯೇ ಎಂದು ತನಿಖೆ ನಡೆಸಲಾಗುತ್ತಿದೆ. ಕಾನೂನು ಬಾಹಿರವಾಗಿ ಹಣ ಬಂದಿರುವುದು ಎಲ್ಲಿಂದ ಎಂಬ ಆರೋಪದ ಮೇಲೆ, ಕಳೆದ 5 ವರ್ಷಗಳ ಹಣಕಾಸು ವ್ಯವಹಾರದ ಮಾಹಿತಿ ನೀಡುವಂತೆ ಬ್ಯಾಂಕ್‌ಗಳಿಗೆ ಇಡಿ ಅಧಿಕಾರಿಗಳು ಪತ್ರ ಬರೆದಿದ್ದಾರೆ.

ವಿದೇಶದಿಂದ ಹಣ ಬಂದಿರುವ ಬಗ್ಗೆ ಮಾಹಿತಿ ನೀಡಲು ಜೊತೆಗೆ ಹಣ ವಿನಿಮಯವಾಗಿದ್ದಕ್ಕೆ ಕಾರಣ ತಿಳಿಸುವಂತೆ ಕೇಳಿ ಪ್ಯಾನ್ ಮತ್ತು ಅಕೌಂಟ್ ಗಳ ವಿವರಗಳನ್ನು ಕೇಳಲಾಗಿದೆ.ಪ್ರಕರಣಕ್ಕೆ ಸಂಬಂಧ ಇಡಿ ತಂಡ ಫೆಮಾ ಮತ್ತು ಫೆರಾ ಕಾಯ್ದೆ ಅಡಿಯಲ್ಲಿ ಪ್ರಕರಣ ದಾಖಲಿಸಿದೆ.ಕೋಮು ಪಿತೂರಿಗೆ ಅಕ್ರಮವಾಗಿ ವಿದೇಶಿ ನಿಧಿ ಬಳಕೆ ಮಾಡಿರುವ ಆರೋಪಗಳ ಕುರಿತು ಅಧಿಕಾರಿಗಳು ಮಾಹಿತಿಯನ್ನು ಕಲೆ ಹಾಕತೊಡಗಿದ್ದಾರೆ.

ಧರ್ಮಸ್ಥಳದಲ್ಲಿ ವಿವಾದ ಹುಟ್ಟುಹಾಕಲು ಶಂಕಿತ ವಿದೇಶಿ ಹಣವನ್ನು ಬಳಸಿವೆ ಎಂದು ಹೇಳಲಾದ ಕೆಲವು ಎನ್‌ಜಿಒಗಳು, ವ್ಯಕ್ತಿಗಳು ಮತ್ತು ಪಾಲುದಾರರಿಗೆ ಸಂಬಂಧಿಸಿದ ಸಂಗತಿಗಳು ಮತ್ತು ದಾಖಲೆಗಳನ್ನು ಅಧಿಕಾರಿಗಳು ಸಂಗ್ರಹಿಸತೊಡಗಿದ್ದಾರೆ.ತನಿಖೆಯು ವಿದೇಶಿ ನಿಧಿಯ ನಿಯಮ ಉಲ್ಲಂಘನೆ ಮತ್ತು ನಿಧಿಯ ಅಕ್ರಮ ಬಳಕೆ ಕುರಿತು ಪುರಾವೆ ಸಿಕ್ಕಲ್ಲಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಮೂಲಗಳು ತಿಳಿಸಿವೆ.

ವಿಚಾರಣೆಯ ಭಾಗವಾಗಿ, ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಮತ್ತು ಇತರ ಬ್ಯಾಂಕ್‌ಗಳಿಗೆ ಪತ್ರ ಬರೆಯಲಾಗಿದೆ. ಅವರ ಪ್ಯಾನ್ ವಿವರಗಳು, ಖಾತೆ ಮಾಹಿತಿ ಮತ್ತು ಎನ್ ಜಿಒ ಗಳಿಗೆ ಸಂಬಂಧಿಸಿದ ಐದು ವರ್ಷಗಳ ವಹಿವಾಟು ದಾಖಲೆಗಳನ್ನು ನೀಡುವಂತೆ ಮನವಿ ಮಾಡಲಾಗಿದೆ.

ಮೈಸೂರಿನ ಒಡನಾಡಿ ಮತ್ತು ಸಂವಾದ ಎಂಬ ಸ್ವಯಂಸೇವಾ ಸಂಸ್ಥೆಗಳಿಗೂ ಜಾರಿನಿರ್ದೇಶನಾಲಯ ನೋಟಿಸ್ ಜಾರಿ ಮಾಡಿ ಅವರ ಬ್ಯಾಂಕ್ ವ್ಯವಹಾರದ ದಾಖಲೆಗಳನ್ನು ಕೇಳಿದೆ ಎಂದು ಹೇಳಲಾಗಿದೆ. ಹಾಗೆಯೇ ಈ ಎರಡೂ ಸಂಸ್ಥೆಗಳು ಬ್ಯಾಂಕ್‌ಗಳಲ್ಲಿ ಹೊಂದಿರುವ ಖಾತೆಗಳ ಸಂಪೂರ್ಣ ವಿವರವನ್ನೂ ನೀಡುವಂತೆಯೂ ಬ್ಯಾಂಕ್‌ಗಳಿಗೆ ಇಡಿ ಸೂಚನೆ ನೀಡಿದೆ ಎಂದು ಹೇಳಲಾಗಿದೆ.

ಸೆ.1 ರಂದು ಧರ್ಮಸ್ಥಳಕ್ಕೆ ಭೇಟಿ ಕೊಟ್ಟಿದ್ದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಅವರು, ಕ್ಷೇತ್ರದ ವಿರುದ್ಧ ಪಿತೂರಿಗೆ




ವಿದೇಶದಿಂದ ಫಂಡಿಂಗ್ ಆಗುತ್ತಿದೆ. ಇದೆಲ್ಲ ಹೊರಗೆ ಬರಬೇಕಾದರೆ ಪ್ರಕರಣವನ್ನು ರಾಜ್ಯ ಸರ್ಕಾರ ಎನ್‌ಐಎ ಅಥವಾ ಸಿಬಿಐಗೆ ವಹಿಸಬೇಕು ಎಂದು ಆಗ್ರಹಿಸಿದ್ದರು.

ಧರ್ಮಸ್ಥಳದ ವಿಚಾರದಲ್ಲಿ ಕಾಣದ ಕೈಗಳು ಕೆಲಸ ಮಾಡುತ್ತಿವೆ. ಬೇರೆ ಬೇರೆ ಕಡೆಯಿಂದ ವಿದೇಶದಿಂದ ಫಂಡ್ ಬಂದಿದೆ. ಯೂಟ್ಯೂಬರ್‌ಗಳಿಗೆ ವಿವಿಧ ಕಡೆಯಿಂದ ಫಂಡ್ ಬಂದಿದೆ. ಇದಕ್ಕೆ ಸಂಬಂಧಿಸಿದಂತೆ ಇಡಿ ತನಿಖೆ ಆಗಲಿ ಎಂದು ಸಂಸದ ಕೋಟ ಶ್ರೀನಿವಾಸ ಪೂಜಾರಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರಿಗೆ ಇತ್ತೀಚೆಗೆ ಪತ್ರ ಬರೆದಿದ್ದರು.

**ಎನ್‌ಐಎ ತನಿಖೆ ಸಾಧ್ಯತೆ :** ಧರ್ಮಸ್ಥಳ ಪ್ರಕರಣದಲ್ಲಿ ವಿದೇಶಿ ಹಣ ಬಂದಿರುವ ಬಗ್ಗೆ ಇಡಿ ರಂಗಪ್ರವೇಶಿಸಿ ತನಿಖೆಗೆ ಮುಂದಾಗಿರುವಾಗಲೇ ರಾಷ್ಟ್ರೀಯ ತನಿಖಾ ದಳ ಸಹ ಧರ್ಮಸ್ಥಳ ಪ್ರಕರಣದ ಬಗ್ಗೆ ತನಿಖೆ ಕೈಗೆತ್ತಿಕೊಳ್ಳುವ ಸಾಧ್ಯತೆ ಇದೆ.

ಧರ್ಮಸ್ಥಳ ವಿರುದ್ಧ ನಡೆದಿರುವ ಷಡ್ಯಂತ್ರದ ಬಗ್ಗೆ ಇಡಿ ತನಿಖೆಯಾಗಬೇಕು ಎಂದು ಪ್ರತಿಪಕ್ಷಗಳಾದ ಬಿಜೆಪಿ ಮತ್ತು ಜೆಡಿಎಸ್ ಒತ್ತಾಯಿಸಿ ಧರ್ಮಸ್ಥಳ ಯಾತ್ರೆ ನಡೆಸಿ ಬೃಹತ್ ಸಮಾವೇಶವನ್ನು ಬಿಜೆಪಿ ನಡೆಸಿತ್ತು.

ಈ ಹಿನ್ನೆಲೆಯಲ್ಲಿ ಕೇಂದ್ರ ಗೃಹ ಇಲಾಖೆ ಧರ್ಮಸ್ಥಳ ಷಡ್ಯಂತ್ರದ ಬಗ್ಗೆ ಎನ್‌ಐಎ ತನಿಖೆ ನಡೆಸಲು ಚಿಂತನೆ ನಡೆಸಿದ್ದು, ಧರ್ಮಸ್ಥಳ ಪ್ರಕರಣದ ಬಗ್ಗೆ ಎನ್‌ಐಎ ತನಿಖೆ ನಡೆಸುವ ಸಾಧ್ಯತೆ ಹೆಚ್ಚಿದೆ.

ರಾಜ್ಯಸರ್ಕಾರ ಧರ್ಮಸ್ಥಳ ಪ್ರಕರಣದ ಬಗ್ಗೆ ಎನ್‌ಐಎ ತನಿಖೆ ಅಗತ್ಯವಿಲ್ಲ. ಎಸ್‌ಐಟಿ ಪೊಲೀಸರೇ ತನಿಖೆಯನ್ನು ಸಮಗ್ರವಾಗಿ ನಡೆಸಿದ್ದಾರೆ ಎಂದು ಹೇಳಿದ್ದರಾದರೂ ಈ ಪ್ರಕರಣ ಬೇರೆ ರಾಜ್ಯಗಳಿಗೂ ವ್ಯಾಪಿಸಿರುವುದರಿಂದ ಎನ್‌ಐಎ ತನಿಖೆಗೆ ಮುಂದಾಗುವ ಸಾಧ್ಯತೆಗಳು ಹೆಚ್ಚಿವೆ.

## ರಷ್ಯಾದಿಂದ ಭಾರತಕ್ಕೆ ರಿಯಾಯ್ತಿ ದರದಲ್ಲಿ ಎಸ್–400 ಕ್ಷಿಪಣಿ ಪೂರೈಕೆ



**ನವದೆಹಲಿ,ಸೆ.3–** ಭಾರತದ ಮೇಲೆ ಅಮೆರಿಕಾ ಸುಂಕಾಸ್ತ್ರ ಏರಿಕೆ ನಡುವೆ ರಷ್ಯಾ, ರಿಯಾಯಿತಿ ದರದಲ್ಲಿ ಭಾರತಕ್ಕೆ ತೈಲ ಮತ್ತು ಎಸ್–400 ಮೇಲ್ಮೈ ಕ್ಷಿಪಣಿಗಳನ್ನು ಪೂರೈಸಲು ಮುಂದಾಗಿದೆ ಎಂದು ಉನ್ನತ ಮೂಲಗಳು ತಿಳಿಸಿವೆ.

ಕಚ್ಚಾ ತೈಲ ಒಂದು ಬ್ಯಾರೆಲ್ ಬ್ರೆಂಟ್‌ಗೆ ಹೋಲಿಸಿದರೆ 3 ರಿಂದ 4 ಡಾಲರ್‌ನಷ್ಟು ಅಗ್ಗವಾಗಲಿದೆ. ಸೆಪ್ಟೆಂಬರ್ ಅಂತ್ಯ ಮತ್ತು ಅಕ್ಟೋಬರ್‌ನಲ್ಲಿ ಭಾರತಕ್ಕೆ ರಿಯಾತಿ ದರದಲ್ಲಿ ತೈಲ ಸಿಗುವ ನಿರೀಕ್ಷೆ ಇದೆ ಎಂದು ಹೇಳಲಾಗಿದೆ.

ಎಸ್–400 ವ್ಯವಸ್ಥೆಗಳಿಗೆ ಸಂಬಂಧಿಸಿದಂತೆ, ರಷ್ಯಾ ಮತ್ತು ಭಾರತ ಈ ನಿಟ್ಟಿನಲ್ಲಿ ಮಾತುಕತೆ ನಡೆಯುತ್ತಿವೆ ಎಲ್ಲಾ ಅಂದುಕೊಂಡಂತೆ ಆದರೆ ರಷ್ಯಾ 2026 ಮತ್ತು 2027ರಲ್ಲಿ ಭಾರತಕ್ಕೆ ಎಸ್–400 ಕ್ಷಪಣಿ ಪೂರೈಸುವ ಸಾಧ್ಯತೆ ಇದೆ ಎಂದು ಹೇಳಲಾಗಿದೆ.

ರಷ್ಯಾದ ಮಿಲಿಟರಿ–ತಾಂತ್ರಿಕ ಮುಖ್ಯಸ್ಥ ಮುಖ್ಯಸ್ಥ ಡಿಮಿಟ್ರಿ ಶುಗಾಯೇವ್ ಪ್ರತಿಕ್ರಿಯಿಸಿ ಭಾರತ ಮತ್ತು ರಷ್ಯಾ ನಡುವೆ 2018 ರಲ್ಲಿ ಐದು ಎಸ್–400 ಕ್ಷಿಪಣಿ ಪೂರೈಕೆಗೆ 5.5 ಬಿಲಿಯನ್ ಡಾಲರ್ ರಕ್ಷಣಾ ವ್ಯವಸ್ಥೆಯ ಒಪ್ಪಂದಕ್ಕೆ ಸಹಿ ಹಾಕಲಾಗಿತ್ತು ಅದರಲ್ಲಿ ಈಗಾಗಲೇ 3 ಕ್ಷಿಪಣಿಗಳನ್ನು ಭಾರತಕ್ಕೆ ಹಸ್ತಾಂತರ ಮಾಡಿದ್ದು ಉಳಿದ ಎರಡು ಕ್ಷಿಪಣಿಗಳನ್ನು ಮಂದಿನ ಎರಡು ವರ್ಷದಲ್ಲಿ ಪೂರೈಕೆ ಮಾಡುವ ಉದ್ದೇಶವಿದೆ ಎಂದು ತಿಳಿಸಿದ್ದಾರೆ.

ಮೇ ತಿಂಗಳಲ್ಲಿ ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಕಾಶ್ಮೀರದಲ್ಲಿ ಭಯೋತ್ಪಾದಕ ಮೂಲಸೌಕರ್ಯಗಳ

ವಿರುದ್ಧ ಭಾರತ ನಡೆಸಿದ ಮಿಲಿಟರಿ ಕಾರ್ಯಾಚರಣೆಯಾದ ಆಪರೇಷನ್ ಸಿಂದೂರ್‌ನಲ್ಲಿ ಎಸ್–400 ವಾಯು ರಕ್ಷಣಾ ವ್ಯವಸ್ಥೆಗಳು ದೊಡ್ಡ ಪಾತ್ರವನ್ನು ವಹಿಸಿದ್ದವು, ಈ ಹಿನ್ನೆಲೆಯಲ್ಲಿ ಇವುಗಳನ್ನು ಮತ್ತಷ್ಟು ಹೆಚ್ಚಿಸಿಕೊಳ್ಳಲು ಭಾರತ ಮುಂದಾಗಿದೆ ಎಂದಿದ್ದಾರೆ.

ಭಾರತ– ರಷ್ಯಾ ಪರಸ್ಪರ ಸಹಕಾರ ವಿಸ್ತರಿಸುವ ಸಾಧ್ಯತೆಯೂ ಇದೆ. ಸಂಬಂಧ ಮಾತುಕತೆ ನಡೆಯುತ್ತಿದೆ. ಜೊತೆಗೆ ರಷ್ಯಾದಿಂದ ಅಗ್ಗದ ತೈಲ ಮತ್ತು ಎಸ್–400 ವ್ಯವಸ್ಥೆಗಳು ಮತ್ತು ಇನ್ನಿತರೆ ಶಸ್ತ್ರಾಸ್ತ್ರ ಪೂರೈಕೆಗೆ ಒತ್ತು ನೀಡಲಾಗುವುದು ಎಂದು ಮಾಹಿತಿ ನೀಡಿದ್ದಾರೆ.

ರಷ್ಯಾದಿಂದ ಭಾರತ ತೈಲ ಖರೀದಿ ಮಾಡುತ್ತಿದೆ ಎನ್ನುವ ಸಂಗತಿಯನ್ನು ಮುಂದಿಟ್ಟುಕೊಂಡು ಕಳೆದ ತಿಂಗಳು, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಭಾರತೀಯ ಆಮದುಗಳ ಮೇಲೆ ಶೇಕಡಾ 50 ಸುಂಕ ವಿಧಿಸಿದ್ದು ಈ ಘಟನೆಯ ನಂತರ ಭಾರತ–ರಷ್ಯಾ ಮತ್ತಷ್ಟು ಹತ್ತಿರವಾಗಿವೆ.

## ಸೌಜನ್ಯ ತಾಯಿ ಹೇಳಿದ ನೈಜ ಸಂಗತಿ ಬಹಿರಂಗಪಡಿಸಿ



**ಬೆಂಗಳೂರು,ಸೆ.3–**ಧರ್ಮಸ್ಥಳದಲ್ಲಿ ಸೌಜನ್ಯ ತಾಯಿಯನ್ನು ಭೇಟಿ ಮಾಡಿದ್ದ ಬಿಜೆಪಿ ನಾಯಕರಿಗೆ ಸೌಜನ್ಯ ತಾಯಿ ಹೇಳಿದ ನೈಜ ಸಂಗತಿಯನ್ನು ಜಗತ್ತಿಗೆ ತಿಳಿಸುವ ಧೈರ್ಯವಿದೆಯೇ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್‌ಖರ್ಗೆ ಸವಾಲು ಹಾಕಿದ್ದಾರೆ.

ಧರ್ಮಸ್ಥಳದ ಬಗ್ಗೆ ಷಡ್ಯಂತ್ರ ನಡೆಯುತ್ತಿದೆ ಎಂದು ಆರೋಪಿಸಿ ಧರ್ಮಸ್ಥಳ ಚಲೋ ಮಾಡಿದ ಬಿಜೆಪಿ ನಾಯಕರು ಸೌಜನ್ಯ ತಾಯಿ ಹೇಳಿದ ಸತ್ಯಸಂಗತಿಯನ್ನು ಬಹಿರಂಗಪಡಿಸಲಿ ಎಂದು ಸಾಮಾಜಿಕ ಜಾಲತಣ ಎಕ್ಸ್‌ನಲ್ಲಿ ಟ್ವೀಟ್ ಮಾಡಿ ಒತ್ತಾಯಿಸಿದ್ದಾರೆ.

ಸೌಜನ್ಯ ಹೆಸರು ಹೇಳಿಕೊಂಡು ಹಣ ಮಾಡಿದ್ದಾರೆ. ಇಷ್ಟು ದೊಡ್ಡ ಮನೆ ಕಟ್ಟಿಸಿದ್ದಾರೆ ಎಂದು ನಿಮ್ಮದೇ ಪಕ್ಷದವರು ಹೇಳುತ್ತಿದ್ದಾರೆ ಎಂಬ ಸೌಜನ್ಯ ತಾಯಿ ಕುಸುಮಾವತಿಯ ಮಾತಿಗೆ ರಾಜ್ಯ ಬಿಜೆಪಿ ನಾಯಕರು ಉತ್ತರ ನೀಡದೆ ಮೌನ ವಹಿಸಿರುವುದನ್ನು ಪ್ರಶ್ನಿಸಿರುವ ಪ್ರಿಯಾಂಕ್‌ಖರ್ಗೆ ವಿಜಯೇಂದ್ರ ಅವರೇ ಮೊದಲು ಸೌಜನ್ಯ ಅವರ ಕುಟುಂಬಕ್ಕೆ ನಿಮ್ಮ ಪಕ್ಷ ನೀಡಿದ ಕಿರುಕುಳಕ್ಕೆ ನ್ಯಾಯ ಸಿಗಬೇಕಲ್ಲವೇ? ಆ ನೊಂದ ಕುಟುಂಬಕ್ಕೆ ಬಿಜೆಪಿ ನೀಡುತ್ತಿರುವ ಕಿರುಕುಳದ ಬಗ್ಗೆ ಉತ್ತರ ಸಿಗಲೇಬೇಕು ಎಂದಿದ್ದಾರೆ.

ಬಿಜೆಪಿ ಯಾರು ಧರ್ಮಸ್ಥಳಕ್ಕೆ ಹೋಗಿದ್ದರೋ ಅವರ ವಿರುದ್ಧವೇ ಕುಸುಮಾವತಿ ಅವರು ದೂರು ಹೇಳಿದ್ದಾರೆ. ಬಿಜೆಪಿಯವರು ಸೌಜನ್ಯ ಪರವೋ ವಿರುದ್ಧವೋ ಎಂಬುದನ್ನು ಸ್ಪಷ್ಟಪಡಿಸುವ ಅಗತವಿದೆ ಎಂದಿದ್ದಾರೆ.

ಸೌಜನ್ಯ ಸಾವಿಗೆ ನ್ಯಾಯ ಸಿಗಬೇಕೆಂದಿಲ್ಲ ಬಿಜೆಪಿ ಯಾರಿಂದ ನ್ಯಾಯ ಸಿಗಬೇಕು ಎಂಬುದನ್ನು ಸೌಜನ್ಯ ತಾಯಿ ಸ್ಪಷ್ಟವಾಗಿ ಹೇಳಿದ್ದಾರೆ. ನ್ಯಾಯ ಕೊಡಿಸುವರೇ ಎಂದು ಖರ್ಗೆ ಟ್ವೀಟ್‌ನಲ್ಲಿ ಪ್ರಶ್ನೆ ಹಾಕಿದ್ದಾರೆ. ಸೌಜನ್ಯ ತಾಯಿಯವರ ಕಾನೂನು ಹೋರಾಟಕ್ಕೆ ಬಿಜೆಪಿ ಪಕ್ಷವೇ ಹಣದ ನೆರವನ್ನು ನೀಡಲಿದೆ ಎಂದು ವಿಜಯೇಂದ್ರ ಘೋಷಿಸಿದ್ದಾರೆ. ಆ ಕಾನೂನು ಹೋರಾಟ ಯಾರ ವಿರುದ್ಧವಾಗಿರುತ್ತದೆ ಎಂಬ ಪ್ರಜ್ಞೆ ಬಿಜೆಪಿಗಿದೆಯೇ ಎಂದು ಪ್ರಶ್ನಿಸಿರುವ ಅವರು, ಸೌಜನ್ಯ ಸಾವಿಗೆ ನ್ಯಾಯ ಕೊಡಿಸುವುದರಲ್ಲಿ ಬಿಜೆಪಿಗೆ ನೈಜ ಬದ್ಧತೆ ಇದ್ದಿದ್ದೇ ಆಗಿದ್ದರೆ ಕುಸುಮಾವತಿ ಅವರ ಮಾತು ಕೇಳಿದ ನಂತರ ಧರ್ಮಸ್ಥಳದಿಂದ ವಾಪಸ್ ಚಲೋ ಕಾರ್ಯಕ್ರಮ ಮಾಡಬೇಕಿತ್ತು ಎಂದು ಅವರು ಟ್ವೀಟ್ ಮಾಡಿದ್ದಾರೆ.

# ಪಕ್ಷ ಬಲವರ್ಧನೆಗೆ ಪ್ರಾಮಾಣಿಕ ಪ್ರಯತ್ನ ಅತಿ ಅವಶ್ಯಕ: ಜಾಬಶೆಟ್ಟಿ

**ಬೀದರ:ಸೆ.3–** ಪಕ್ಷ ಬಲವರ್ಧನೆಗೆ ಪ್ರಾಮಾಣಿಕ ಪ್ರಯತ್ನ ಅತಿ ಅವಶ್ಯಕವಾಗಿದೆ. ಈ ಕುರಿತು ಪ್ರತಿಯೊಬ್ಬರು ಕಾರ್ಯಪ್ರವೃತ್ತರಾಗಬೇಕೆಂದು ಜಿಲ್ಲಾ ಕಾಂಗ್ರೆಸ್ ಸಮಿತಿಯ ಜಿಲ್ಲಾಧ್ಯಕ್ಷ ಬಸವರಾಜ ಜಾಬಶೆಟ್ಟಿ ಕರೆ ನೀಡಿದರು.

ಜಿಲ್ಲಾ ಕಾಂಗ್ರೇಸ್ ಕಚೇರಿಯಲ್ಲಿ ಮಂಗಳವಾರ ಜಿಲ್ಲಾ ಕಾಂಗ್ರೆಸ್ ಸಮಿತಿ (ಪದವೀಧರ ವಿಭಾಗ)ದ ವತಿಯಿಂದ ಹಮ್ಮಿಕೊಂಡ ಕಾರ್ಯಕರ್ತರ ಸಭೆಯನ್ನು ಉದ್ದೇಶಿಸಿ ಮಾತನಾಡಿದರು. ಪಕ್ಷ ಎಂದರೆ ತಾಯಿ ಇದ್ದಂತೆ. ವ್ಯಕ್ತಿಗಿಂತ ಪಕ್ಷ ಮುಖ್ಯ ಎನ್ನುವ ಭಾವನೆ ಪ್ರತಿಯೊಬ್ಬರಲ್ಲೂ ಬರಬೇಕು. ಪಕ್ಷದಿಂದಲೇ ನಾವೆಲ್ಲರೂ ಎನ್ನುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ತಿಳಿಸಿದರು.

ಜಿಲ್ಲಾ ಕಾಂಗ್ರೆಸ್ ಸಮಿತಿಯ ಪದವೀಧರ ವಿಭಾಗದ ಅಧ್ಯಕ್ಷರಾದ ಚಂದ್ರಕಾಂತ ಪಾಟೀಲ ಅವರು ಪ್ರಾಸ್ತಾವಿಕವಾಗಿ ಮಾತನಾಡಿ ಮುಂಬರುವ ದಿನಗಳಲ್ಲಿ ಗ್ರಾಮ ಮಟ್ಟದಲ್ಲಿ ಸಂಘಟನೆಯೆನ್ನು ಬೆಳೆಸುವದಾಗಿ ಹೇಳಿದರು. ಸಭೆಯಲ್ಲಿ ಕಾಂಗ್ರೆಸ್ ಪಕ್ಷದ ರಾಜ್ಯ ಉಪಾಧ್ಯಕ್ಷ ಜಾನ್ ವೇಸ್ಲಿ ಪಕ್ಷ ಬಲವರ್ಧನೆ ಕುರಿತು ತಮ್ಮ ಸಲಹೆ ಸೂಚನೆಗಳನ್ನು ನೀಡಿದರು. ಸಭೆಯಲ್ಲಿ ಪದವೀಧರ ವಿಭಾಗದ ಪ್ರಮುಖರಾದ ಶಶಿಧರ್ ಭೂಷಣ್, ಜಗದೀಶ್




ಕುಂಟೆಗಾವೆ, ಪ್ರೇಮನಾಥ್, ಈಶ್ವರ್, ಖಾಜಾ ಮೋಹಿನೋದ್ದಿನ್, ರಾಜಕುಮಾರ್ ಮುತ್ತಂಗಿಕರ್, ಉಮೇಶ್ ಸೋಪಾನ ಮತ್ತಿತರರು ಉಪಸ್ಥಿತರಿದ್ದರು.

# 2025–26ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ರಾಜ್ಯಕ್ಕೆ 450 ವೈದ್ಯಕೀಯ ಸೀಟು ಹಂಚಿಕೆ

**ಬೆಂಗಳೂರು,ಸೆ.3–** ಪ್ರಸಕ್ತ 2025–26ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ಅನ್ವಯವಾಗುವಂತೆ ರಾಜ್ಯಕ್ಕೆ ರಾಜ್ಯಕ್ಕೆ 450 ವೈದ್ಯಕೀಯ ಸೀಟುಗಳನ್ನು ರಾಷ್ಟ್ರಿಯ ವೈದ್ಯಕೀಯ ಆಯೋಗ(ಎನ್‌ಎಂಸಿ) ಮಂಜೂರು ಮಾಡಿದೆ. ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಅವರ ಸತತದ ಪ್ರಯತ್ನದ ಫಲವಾಗಿ ಬಹುವರ್ಷಗಳ ನಂತರ ರಾಜ್ಯಕ್ಕೆ ಇಷ್ಟು ದೊಡ್ಡ ಮೊತ್ತದ ವೈದ್ಯಕೀಯ ಸೀಟುಗಳು ಲಭ್ಯವಾಗಿವೆ.

ರಾಷ್ಟ್ರಿಯ ವೈದ್ಯಕೀಯ ಆಯೋಗ ಮಂಜೂರು ಮಾಡಿರುವ ಸೀಟುಗಳಲ್ಲಿ ಸರ್ಕಾರದ ಅಧೀನದಲ್ಲಿರುವ 8 ವೈದ್ಯಕೀಯ ಕಾಲೇಜುಗಳಿಗೆ ತಲಾ 50 ಹೆಚ್ಚುವರಿ ಸೀಟುಗಳು ಹಾಗೂ ಒಂದು ಡೀಮ್ಡ್ ವಿಶ್ವವಿದ್ಯಾನಿಲಯಕ್ಕೆ ಮಂಜೂರು ಮಾಡಲಾಗಿದೆ.

ಹೆಚ್ಚುವರಿ ಸೀಟುಗಳನ್ನು ಪಡೆಯುವ ಕಾಲೇಜುಗಳಲ್ಲಿ ಬೆಳಗಾವಿ ವೈದ್ಯಕೀಯ ವಿಜ್ಞಾನ ಸಂಸ್ಥೆ, ಚಿಕ್ಕಬಳ್ಳಾಪುರ ವೈದ್ಯಕೀಯ ವಿಜ್ಞಾನ ಸಂಸ್ಥೆ, ಗುಲ್ಬರ್ಗಾ ವೈದ್ಯಕೀಯ ವಿಜ್ಞಾನ ಸಂಸ್ಥೆ, ಹಾಸನ ವೈದ್ಯಕೀಯ ವಿಜ್ಞಾನ ಸಂಸ್ಥೆ, ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ರಾಯಚೂರು ವೈದ್ಯಕೀಯ ವಿಜ್ಞಾನ ಸಂಸ್ಥೆ, ಶ್ರೀ ಅಟಲ್ ಬಿಹಾರಿ ವಾಜಪೇಯಿ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು ಮತ್ತು ವಿಜಯನಗರ ವೈದ್ಯಕೀಯ ವಿಜ್ಞಾನ ಸಂಸ್ಥೆ ಸೇರಿವೆ.

ಇದೇ ವೇಳೆ ಪ್ರವೇಶ ಹೆಚ್ಚಳಕ್ಕೆ ಅರ್ಜಿ ಸಲ್ಲಿಸಿದ್ದ ಏಳು ಕಾಲೇಜುಗಳಾದ ಬೀದರ್ ವೈದ್ಯಕೀಯ ವಿಜ್ಞಾನ ಸಂಸ್ಥೆ, ಚಾಮರಾಜನಗರ ವೈದ್ಯಕೀಯ ವಿಜ್ಞಾನ ಸಂಸ್ಥೆ, ಗದಗ ವೈದ್ಯಕೀಯ ವಿಜ್ಞಾನ ಸಂಸ್ಥೆ, ಕಾರವಾರ ವೈದ್ಯಕೀಯ ವಿಜ್ಞಾನ ಸಂಸ್ಥೆ, ಕೊಪ್ಪಳ ವೈದ್ಯಕೀಯ ವಿಜ್ಞಾನ ಸಂಸ್ಥೆ, ಮಂಡ್ಯ ವೈದ್ಯಕೀಯ ವಿಜ್ಞಾನ ಸಂಸ್ಥೆ ಮತ್ತು ಶಿವಮೊಗ್ಗ ವೈದ್ಯಕೀಯ ವಿಜ್ಞಾನ ಸಂಸ್ಥೆಗಳಿಗೆ ಅನುಮೋದನೆ ದೊರೆತಿಲ್ಲ.

ಹೊಸ ಸರ್ಕಾರಿ ವೈದ್ಯಕೀಯ ಕಾಲೇಜುಗಳ ಪಟ್ಟಿಯಲ್ಲಿ, ರಾಮನಗರ ವೈದ್ಯಕೀಯ ವಿಜ್ಞಾನ ಸಂಸ್ಥೆ ಮತ್ತು ಕನಕಪು–ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ.ರಾಮನಗರ ಮತ್ತು ಕನಕಪುರದಲ್ಲಿ ಸ್ಥಾಪಿಸಲಾಗಿರುವ ಎರಡು ವೈದ್ಯಕೀಯ ಕಾಲೇಜುಗಳಿಗೆ 250 ವೈದ್ಯಕೀಯ ಸೀಟುಗಳನ್ನು ಮಂಜೂರು ಮಾಡುವಂತೆ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಜೊತೆಗೆ ಹುಬ್ಬಳ್ಳಿ ಜೆಎಂಎಂಎಂಸಿ , ತುಮಕೂರಿನ ಶ್ರೀ ಸಿದ್ದಾರ್ಥ ವೈದ್ಯಕೀಯ ಕಾಲೇಜುಗಳು ತಮಗೂ 50 ವೈದ್ಯಕೀಯ ಸೀಟುಗಳನ್ನ ನೀಡಬೇಕೆಂಬ ಪ್ರಸ್ತಾವನೆಗೆ ಎನ್‌ಎಂಸಿ ಅನುಮೋದನೆ ನೀಡಿಲ್ಲ.ದೇಶಾದ್ಯಂತ ಪ್ರಸಕ್ತ ವರ್ಷ 8000




ವೈದ್ಯಕೀಯ ಸೀಟುಗಳನ್ನು ಹೆಚ್ಚಿಸಲಾಗುವುದು ಎಂದು ಎನ್‌ಎಂಸಿಯ ಅಧ್ಯಕ್ಷ ಅಭಿಜಿತ್ ಚಂದ್ರಕಾಂತ್ ಸೇಠ್ ಹೇಳಿದ್ದರು.

**ಪ್ರಸ್ತಾವನೆ ಸಲ್ಲಿಸಿದ ಸಚಿವರು:** ಎನ್‌ಎಂಸಿ ದೇಶಾದ್ಯಂತ ವೈದ್ಯಕೀಯ ಸೀಟುಗಳನ್ನು ಹೆಚ್ಚಳ ಮಾಡುವುದಾಗಿ ಘೋಷಣೆ ಮಾಡಿದ ಬೆನ್ನಲ್ಲೆ ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಅವರು ನವದೆಹಲಿಗೆ ತೆರಳಿ ಭೇಟಿಯಾಗಿ ರಾಜ್ಯದ 15 ಸರ್ಕಾರಿ ವೈದ್ಯಕೀಯ ಕಾಲೇಜುಗಳಿಗೆ ಹೆಚ್ಚುವರಿ ವೈದ್ಯಕೀಯ ಸೀಟುಗಳನ್ನು ಮಂಜೂರು ಮಾಡುವಂತೆ ಪ್ರಸ್ತಾವನೆ ಸಲ್ಲಿಸಿದ್ದರು.ಕರ್ನಾಟಕದಲ್ಲಿ ಪ್ರತಿ ವರ್ಷ ವೈದ್ಯಕೀಯ ದಾಖಲಾತಿಯಾಗುವವರ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಾಗುತ್ತಿದೆ. ಕೆಲವು ಪ್ರತಿಭಾವಂತ ವಿದ್ಯಾರ್ಥಿಗಳು ಖಾಸಗಿ ಕಾಲೇಜುಗಳಿಗೆ ಅಧಿಕ ಶುಲ್ಕ ಕಟ್ಟಿ ಪ್ರವೇಶ ಪಡೆಯಲು ಸಾಧ್ಯವಾಗುತ್ತಿಲ್ಲ. ಹೀಗಾಗಿ ಕರ್ನಾಟಕಕ್ಕೆ ನಿಗದಿಪಡಿಸಿರುವ ವೈದ್ಯಕೀಯ ಸೀಟುಗಳು ಜೊತೆಗೆ ಹೆಚ್ಚುವರಿಯಾಗಿ ವೈದ್ಯಕೀಯ ಸೀಟುಗಳನ್ನು ಮಂಜೂರು ಮಾಡುವಂತೆ ಮನವಿ ಮಾಡಿದ್ದರು.

ಕರ್ನಾಟಕ ಶೈಕ್ಷಣಿಕ ಕ್ಷ?ತ್ರದಲ್ಲಿ ಅತ್ಯಂತ ಮುಂದುವರೆದ ರಾಜ್ಯವಾಗಿದೆ. ಪ್ರತಿ ವರ್ಷ ಸಾವಿರಾರು ವೈದ್ಯಕೀಯ ಆಕಾಂಕ್ಷಿಗಳು ವೈದ್ಯಕೀಯ ಸೀಟು ಪಡೆಯಲು ಹರಸಾಹಸಪಡುತ್ತಾರೆ. ಹೆಚ್ಚುವರಿ ಸೀಟುಗಳನ್ನು ಮಂಜೂರು ಮಾಡಿದರೆ ಅನುಕೂಲವಾಗುತ್ತದೆ ಎಂಬುದನ್ನು ಎಂಎನ್‌ಸಿ ಅಧ್ಯಕ್ಷ ಅಭಿಜಿತ್ ಚಂದ್ರಕಾಂತ್ ಸೇಠ್ ಅವರಿಗೆ ಅಂಕಿಸಂಖ್ಯೆಗಳ ಸಮೇತ ವಿವರಿಸಿದ್ದರು.

ಸಚಿವರ ಮಾತಿಗೆ ಸ್ಪಂದಿಸಿರುವ ಎನ್‌ಎಂಸಿ ಬಹುವರ್ಷಗಳ ನಂತರ ರಾಜ್ಯಕ್ಕೆ ದೊಡ್ಡ ಸಂಖ್ಯೆಯ ವೈದ್ಯಕೀಯ ಸೀಟುಗಳನ್ನು ಮಂಜೂರು ಮಾಡುವ ಮೂಲಕ ವೈದ್ಯಕೀಯ ವಿದ್ಯಾರ್ಥಿಗಳಲ್ಲಿ ಮಂದಹಾಸ ಮೂಡುವಂತೆ ಮಾಡಿದೆ.

# ಸೌಜನ್ಯ ಕೇಸ್ : ಕ್ಲೀನ್‌ಚಿಟ್ ಪಡೆದಿದ್ದ ಆರೋಪಿಗಳನ್ನು ಪುನಃ ತನಿಖೆಗೆ ಒಳಪಡಿಸಿದ ಎಸ್‌ಐಟಿ

**ಬೆಂಗಳೂರು,ಸೆ.3–** ರಾಜ್ಯಾದ್ಯಂತ ಭಾರೀ ಸದ್ದು ಮಾಡಿದ್ದ ವೈದ್ಯಕೀಯ ವಿದ್ಯಾರ್ಥಿನಿ ಸೌಜನ್ಯ ಭಟ್ ಕೊಲೆ ಪ್ರಕರಣದಲ್ಲಿ ಈ ಹಿಂದೆ ಸಿಬಿಐನಿಂದ ಕ್ಲಿನ್‌ಚಿಟ್ ಪಡೆದಿದ್ದ ಆರೋಪಿಗಳನ್ನು ವಿಶೇಷ ತನಿಖಾ ತಂಡ(ಎಸ್‌ಐಟಿ) ಪುನಃ ತನಿಖೆಗೆ ಒಳಪಡಿಸಿದೆ. ಪ್ರಕರಣದಲ್ಲಿ ತಳುಕು ಹಾಕಿಕೊಂಡಿದ್ದ ಉದಯ್‌ಕುಮಾರ್ ಜೈನ್, ಧೀರಜ್ ಕೆಲ್ಲಾ ಮತ್ತು ಮಲ್ಲಿಕ ಜೈನ್ ಅವರುಗಳಿಂದ ಬೆಳ್ತಂಗಡಿಯ ಎಸ್‌ಐಟಿ ಕಚೇರಿಯಲ್ಲಿ ಮಾಹಿತಿ ಪಡೆಯಲಾಗಿದೆ.

ಇತ್ತಿಚೆಗಷ್ಟೆ ಸೌಜನ್ಯ ತಾಯಿ ಎಸ್‌ಐಟಿಗೆ ದೂರು ನೀಡಿ ತಮ ಮಗಳ ಕೊಲೆ ಪ್ರಕರಣವನ್ನು ತನಿಖೆ ನಡೆಸಬೇಕೆಂದು ಮನವಿ ಮಾಡಿದ್ದರು. ಇದರ ಬೆನ್ನಲ್ಲೆ ಮೂವರನ್ನು ವಿಚಾರಣೆಗೆ ಗುರಿಪಡಿಸಿರುವುದು ಕುತೂಹಲಕ್ಕೆ ಕಾರಣವಾಗಿದೆ.

**ಪ್ರಕರಣದ ಹಿನ್ನೆಲೆ :** 2012ರ ಅಕ್ಟೊಬರ್‌ನಲ್ಲಿ ಸೌಜನ್ಯ ಕಾಲೇಜಿನಿಂದ ಮನೆಗೆ ತೆರಳುವಾಗ ಕಾಣೆಯಾಗಿದ್ದರು. ಮರುದಿನ ಅವರ ಮೃತದೇಹ ಧರ್ಮಸ್ಥಳದ ಬಳಿಯ ಪಾಂಗಲದಲ್ಲಿ ಬೆತ್ತಲೆ ಸ್ಥಿತಿಯಲ್ಲಿ ಪತ್ತೆಯಾಗಿತ್ತು. ಬೆಳ್ತಂಗಡಿ ಪೊಲೀಸರು ಆರಂಭಿಕ ತನಿಖೆ ನಡೆಸಿದ್ದು, ಸಂತೋಷ್ ರಾವ್ ಎಂಬಾತನನ್ನು ಬಂಧಿಸಿದ್ದರು. ನಂತರ ಈ ಪ್ರಕರಣವನ್ನು ಸಿಐಡಿ ಮತ್ತು 2013ರಲ್ಲಿ ಸಿಬಿಐಗೆ ವರ್ಗಾಯಿಸಲಾಗಿತ್ತು. ಆದರೆ 2023ರ ಜೂನ್ 16ರಂದು ಸಿಬಿಐ ವಿಶೇಷ ನ್ಯಾಯಾಲಯವು ಸಂತೋಷ್ ರಾವ್‌ನನ್ನು ಸಾಕ್ಷ್ಯಗಳ ಕೊರತೆಯಿಂದಾಗಿ ಖುಲಾಸೆಗೊಳಿಸಿತ್ತು. ತನಿಖೆಯಲ್ಲಿ ಲೋಪದೋಷಗಳಿವೆ ಎಂದು ನ್ಯಾಯಾಲಯ ಟೀಕಿಸಿತ್ತು. ಇದರಿಂದ ಸೌಜನ್ಯ ಕುಟುಂಬಸ್ಥರು ಮತ್ತು ಕಾರ್ಯಕರ್ತರು ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದರು.

ಈಗ ಎಸ್‌ಐಟಿ ಈ ಪ್ರಕರಣವನ್ನು ಕೈಗೆತ್ತಿಕೊಂಡಿದ್ದು, ಉದಯ್ ಜೈನ್ ಸೇರಿದಂತೆ ಆರೋಪಿತರನ್ನು ವಿಚಾರಣೆಗೊಳಪಡಿಸಿದೆ.




ಉದಯ್ ಜೈನ್ ಅವರಿಗೆ ಎಸ್‌ಐಟಿ ಕರೆ ಮಾಡಿ ಇಂದು ಬೆಳ್ತಂಗಡಿ ಕಚೇರಿಗೆ ಬರಲು ಸೂಚಿಸಿತ್ತು.

ಈ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾನು ಯಾವುದೇ ವಿಚಾರಣೆಗೆ ಸಿದ್ಧನಿದ್ದೇನೆ. ಸತ್ಯವನ್ನು ಹೇಳುವವರಿಗೆ ಭಯವಿಲ್ಲ, ಸುಳ್ಳು ಹೇಳುವವರಿಗೇ ಭಯ ಇರುತ್ತದೆ ಎಂದು ಹೇಳಿದರು. ತಾವು ಈಗಾಗಲೇ ಸಿಬಿಐ ತನಿಖೆಯಲ್ಲಿ ಭಾಗಿಯಾಗಿದ್ದು, ಡಿಎನ್‌ಎ, ಬ್ರೈನ್ ಮ್ಯಾಪಿಂಗ್, ಮತ್ತು ಪಾಲಿಗ್ರಾಫ್ ಪರೀಕ್ಷೆಗಳಿಗೆ ಒಳಗಾಗಿದ್ದೇವೆ ಎಂದು ಒತ್ತಿ ಹೇಳಿದರು.

ಇನ್ನೊಮ್ಮೆ ಬ್ರೈನ್ ಮ್ಯಾಪಿಂಗ್ ಮಾಡಲಿ, ನಾನು ಸಿದ್ಧನಿದ್ದೇನೆ. ಸಾಯುವವರೆಗೂ ತನಿಖೆಗೆ ತಯಾರಾಗಿದ್ದೇನೆ ಎಂದು ಉದಯ್ ಜೈನ್ ತಮ ನಿರಪರಾಧಿತ್ವವನ್ನು ಸಮರ್ಥಿಸಿಕೊಂಡರು. ಅವರು ಸೌಜನ್ಯ ಕುಟುಂಬದ ತಾಯಿಯ ಬಗ್ಗೆ ಗೌರವ ವ್ಯಕ್ತಪಡಿಸಿದರು ಕೂಡ ಕುಟುಂಬವು ತಮನ್ನು ಬಾಣವಾಗಿ ಬಳಸಿಕೊಂಡು ತಮ ಖ್ಯಾತಿಗೆ ಕಳಂಕ ತಂದಿದೆ ಎಂದು ಆರೋಪಿಸಿದ್ದಾರೆ.

## ಕಬ್ಬಡಿಯಲ್ಲಿ ಬಾಲಕಿಯರ ಪದವಿ ಪೂರ್ವ ಕಾಲೇಜು ಪ್ರಥಮ ಸ್ಥಾನ



ಯುವ ಮಾರ್ಗ ಸುದ್ದಿ

**ದೇವದುರ್ಗ,ಸೆ.3–** ತಾಲೂಕು ಮಟ್ಟದ ಪದವಿ ಪೂರ್ವ ಕಾಲೇಜುಗಳ ಕ್ರೀಡಾಕೂಟದಲ್ಲಿ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜ್ ದೇವದುರ್ಗ ಕಬ್ಬಡಿ ಪಂದ್ಯಾವಳಿಯಲ್ಲಿ ಪ್ರಥಮ ಸ್ಥಾನವನ್ನು ಪಡೆದು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಈ ಸಂದರ್ಭದಲ್ಲಿ ಕಾಲೇಜಿನ ಪ್ರಾಚಾರ್ಯರಾದ ಗರುಡವಾಹನ ಉಪನ್ಯಾಸಕರಗಳಾದ ಶಿವಲಿಂಗಪ್ಪ ಜಂಬಯ್ಯ ರಾಘವೇಂದ್ರ ಕೆ ಮಮತಾ ಆದಿ ದೈಹಿಕ ಶಿಕ್ಷಕರು ವಿನೋದ ಹಿರೇಬೂದೂರ ಭೀಮರಾಯ ಅಭಿನಂದಿಸಿದ್ದಾರೆ.

## ಪ್ರಬಂಧ ಸ್ಪರ್ಧೆ ನಡೆಸಲು ಬಿಇಓ ಡಾ.ಈರಣ್ಣ ಕೋಸಗಿ ಸೂಚನೆ

**ರಾಯಚೂರು,ಸೆ.3–**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಶಾಲಾ ಶಿಕ್ಷಣ ಇಲಾಖೆಗಳ ಸಹಯೋಗದಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಅವರ 156ನೇ ಜಯಂತಿಯ ಅಂಗವಾಗಿ ಸೆಪ್ಟೆಂಬರ್ 10ರೊಳಗೆ ರಾಯಚೂರು ತಾಲೂಕಿನ ಪ್ರೌಢಶಾಲೆಗಳಲ್ಲಿ ಬಾಪೂಜಿ ಪ್ರಬಂಧ ಸ್ಪರ್ಧೆ ಆಯೋಜಿಸಬೇಕು ಎಂದು ರಾಯಚೂರು ತಾಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಡಾ.ಈರಣ್ಣ ಕೋಸಗಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ಬಗ್ಗೆ ರಾಯಚೂರು ತಾಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಯಿಂದ ಎಲ್ಲ ಪ್ರೌಢಶಾಲೆಗಳ ಮುಖ್ಯ ಗುರುಗಳಿಗೆ ಸುತ್ತೋಲೆ ಕಳುಹಿಸಿದ್ದು, ಅದರಂತೆ ಎಲ್ಲ ಶಾಲೆಗಳಲ್ಲಿ ಬಾಪೂಜಿ ಪ್ರಬಂಧ ಸ್ಪರ್ಧೆ ಆಯೋಜಿಸಿ ಆ ಎಲ್ಲ ಪ್ರಬಂಧಗಳನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳು, ಜಿಲ್ಲಾ ಪಂಚಾಯತ್ ಕಚೇರಿ ಹಿಂದುಗಡೆ, ರಾಯಚೂರು ಇಲ್ಲಿಗೆ ಸಲ್ಲಿಸಬೇಕು.

ಆಸ್ತಕ ಪ್ರೌಢಶಾಲಾ ವಿದ್ಯಾರ್ಥಿಗಳು ತಮ್ಮ ತಮ್ಮ ಶಾಲೆಗಳಲ್ಲಿ ನಡೆಸುವ ಪ್ರಬಂಧ ಸ್ಪರ್ಧೆಯಲ್ಲಿ ಭಾಗಿಯಾಗಿ 1. ಸ್ವಚ್ಚತೆಯ ಪಾಠ – ಗಾಂಧೀಜಿಯವರ ಸಂದೇಶ., 2. ಮಕ್ಕಳ ಭವಿಷ್ಯ ನಿರ್ಮಾಣದಲ್ಲಿ ಗಾಂಧೀಜಿಯವರ ಪಾತ್ರ ಮತ್ತು 3. ಗಾಂಧೀಜಿಯವರ ಸ್ವಾತಂತ್ರ್ಯದ ಕನಸು – ನನ್ನ ಕಲ್ಪನೆ ಈ ಮೂರು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು 700 ರಿಂದ 800 ಪದಗಳು ಮೀರದಂತೆ ಪ್ರಬಂಧ ಬರೆಯಬೇಕು. ಪ್ರಬಂಧವು ಸಂಪೂರ್ಣವಾಗಿ ಸ್ವರಚಿತವಾಗಿರಬೇಕು., ಸ್ಪರ್ಧೆ ಏರ್ಪಡಿಸುವ ಸ್ಥಳದಲ್ಲಿಯೇ ಶುದ್ಧ ಕೈಬರಹದಲ್ಲಿ ಪ್ರಬಂಧ ಬರೆಯಬೇಕು. ಪ್ರಬಂಧವು ಈ ಮೊದಲು ಎಲ್ಲಿಯೂ ಪ್ರಕಟವಾಗಿರಬಾರದು. ಜಿಲ್ಲಾಮಟ್ಟದಲ್ಲಿ ಪ್ರಥಮ ಸ್ಥಾನಕ್ಕೆ 3,000 ರೂ., ದ್ವಿತೀಯ ಸ್ಥಾನಕ್ಕೆ 2,000 ರೂ., ತೃತೀಯ ಸ್ಥಾನಕ್ಕೆ 1,000 ರೂ. ಬಹುಮಾನ ನೀಡಲಾಗುತ್ತದೆ. ಜಿಲ್ಲಾಮಟ್ಟದ ಪ್ರಥಮ ಬಹುಮಾನ ವಿಜೇತ ಪ್ರಬಂಧಗಳನ್ನು ರಾಜ್ಯಮಟ್ಟದಲ್ಲಿ ಮರು ಮೌಲ್ಯಮಾಪನ ನಡೆಸಿ ರಾಜ್ಯಮಟ್ಟದಲ್ಲಿ ಪ್ರಥಮ ಸ್ಥಾನಕ್ಕೆ 31,000 ರೂ., ದ್ವಿತೀಯ ಸ್ಥಾನಕ್ಕೆ 21,000 ರೂ., ಹಾಗೂ ತೃತೀಯ ಸ್ಥಾನಕ್ಕೆ 11,000 ರೂ.ಗಳು ಬಹುಮಾನ ನೀಡಿ ಪ್ರಬಂಧ ರಚನೆಕಾರರಿಗೆ ಗೌರವಿಸಲಾಗುತ್ತದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅತಿವೃಷ್ಟಿ: ವಿಶೇಷ ಪ್ಯಾಕೇಜ್‌ಗೆ ಒತ್ತಾಯ




**ಬೀದರ್.ಸೆ.3–**ಅತಿವೃಷ್ಟಿಯಿಂದ ಬೆಳೆ, ಸಾರ್ವಜನಿಕ ಆಸ್ತಿ ಪಾಸ್ತಿ ಹಾನಿಗೀಡಾದ ಬೀದರ್ ತಾಲ್ಲೂಕಿಗೆ ವಿಶೇಷ ಪ್ಯಾಕೇಜ್ ಘೋಷಿಸಬೇಕು ಎಂದು ಕರ್ನಾಟಕ ರಕ್ಷಣಾ ವೇದಿಕೆಯ ಬೀದರ್ ತಾಲ್ಲೂಕು ಘಟಕ ಒತ್ತಾಯಿಸಿದೆ.

ತಾಲ್ಲೂಕು ಘಟಕದ ಪದಾಧಿಕಾರಿಗಳು ನಗರದಲ್ಲಿ ಮಂಗಳವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಬರೆದ ಮನವಿ ಪತ್ರವನ್ನು ತಹಶೀಲ್ದಾರ್ ರವೀಂದ್ರ ದಾಮಾ ಅವರಿಗೆ ಸಲ್ಲಿಸಿದರು.

ಬೆಳೆ ನಷ್ಟಕ್ಕೆ ಹೆಕ್ಟೇರ್‌ಗೆ ರೂ. 50 ಸಾವಿರ ಪರಿಹಾರ, ಹಿಂಗಾರು ಹಂಗಾಮಿಗೆ ಉಚಿತ ಬೀಜ, ಮನೆ ಹಾನಿಗೆ ರೂ. 30 ಸಾವಿರ ಮುಂಗಡ ಪರಿಹಾರ, ವಿಧಾನಸಭಾ ಕ್ಷೇತ್ರಕ್ಕೆ ರೂ. 50 ಕೋಟಿ ವಿಶೇಷ ಅನುದಾನ, ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ಕಳೆದ ವರ್ಷಕ್ಕಿಂತ ಶೇ 30 ರಷ್ಟು ಹೆಚ್ಚು ಅನುದಾನ ಒದಗಿಸಬೇಕು ಎಂದು ಆಗ್ರಹಿಸಿದರು.

ವೇದಿಕೆಯ ಬೀದರ್ ತಾಲ್ಲೂಕು ಘಟಕದ ಅಧ್ಯಕ್ಷ ವೀರಶೆಟ್ಟಿ ಗೌಸಪುರೆ ನಿಯೋಗದ ಮುಂದಾಳತ್ವ ವಹಿಸಿದ್ದರು. ತಾಲ್ಲೂಕು ಘಟಕದ ಗೌರವಾಧ್ಯಕ್ಷ ಶಿವಪ್ಪ, ಉಪಾಧ್ಯಕ್ಷ ಉತ್ತಮ ಕೆಂಪೆ, ಪ್ರಮುಖರಾದ ನಾಗೇಶ, ಅಶೋಕ್, ಅಲ್‌ಬಾಷಕ್, ವಿಷ್ಣು ಕೆಂಪೆ ಮತ್ತಿತರರು ಇದ್ದರು

## ಲಾ ನಿನಾ ಚಂಡಮಾರುತ ಅಪ್ಪಳಿಸುವ ಎಚ್ಚರಿಕೆ




**ನವದೆಹಲಿ,ಸೆ.3:–** ಧಾರಾಕಾರ ಮಳೆಯಿಂದಾಗಿ ದೇಶದ ಹಲವು ಭಾಗಗಳಲ್ಲಿ ಪ್ರವಾಹದಂತಹ ಪರಿಸ್ಥಿತಿಗಳು ಉದ್ಭವಿಸಿವೆ. ಪಂಜಾಬ್ ಮತ್ತು ಹರಿಯಾಣದಲ್ಲಿ ಪರಿಸ್ಥಿತಿ ವಿಶೇಷವಾಗಿ ಗಂಭೀರವಾಗಿದೆ. ಏತನ್ಮಧ್ಯೆ, ವಿಶ್ವ ಹವಾಮಾನ ಸಂಸ್ಥೆ (ಡಬ್ಲ್ಯೂ ಎಂ ಓ) ಸೆಪ್ಟೆಂಬರ್‌ನಲ್ಲಿ ಲಾ ನಿನಾ ಚಂಡಮಾರುತ ಅಪ್ಪಳಿಸಬಹುದು ಎಂದು ಎಚ್ಚರಿಕೆ ನೀಡಿದೆ, ಇದು ಹವಾಮಾನ ಮತ್ತು ಹವಾಮಾನ ವ್ಯವಸ್ಥೆಯ ಮೇಲೆ ಗಂಭೀರ ಪರಿಣಾಮ ಬೀರುತ್ತದೆ. ಇದು ಉತ್ತರ ಭಾರತದಲ್ಲಿ ಚಳಿಗಾಲದಲ್ಲಿ ತೀವ್ರ ಶೀತದ ಸಾಧ್ಯತೆಯನ್ನು ಹೆಚ್ಚಿಸುತ್ತದೆ ಎಂದು ತಜ್ಞರು ಊಹಿಸುತ್ತಾರೆ.

ಡಬ್ಲ್ಯೂ ಎಂ ಓ ಪ್ರಕಾರ, ಲಾ ನಿನಾ ಪರಿಣಾಮವು ಸಾಮಾನ್ಯ ಶೀತದ ಜೊತೆಗೆ ಮಳೆಯ ತೀವ್ರತೆಯನ್ನು ಹೆಚ್ಚಿಸುತ್ತದೆ. ಇದರ ಪರಿಣಾಮವು ಕೃಷಿ, ಜಲ ಮೂಲಗಳು ಮತ್ತು ಸಾಮಾನ್ಯ ಜೀವನದ ಮೇಲೆ ನೇರವಾಗಿ ಗೋಚರಿಸುತ್ತದೆ.

**ಲಾ ನಿನಾ ಎಂದರೇನು ಮತ್ತು ಅದರ ಪರಿಣಾಮಗಳು–** ಲಾ ನಿನಾ ಎಂಬುದು ಪೆಸಿಫಿಕ್ ಮಹಾಸಾಗರದ ನೀರನ್ನು ತಂಪಾಗಿಸುವ ಪ್ರಕ್ರಿಯೆಯಾಗಿದ್ದು, ಇದು ಮಾನ್ಸೂನ್ ಅನ್ನು ಬಲಪಡಿಸುತ್ತದೆ ಮತ್ತು ಭಾರತದಲ್ಲಿ ಧಾರಾಕಾರ ಮಳೆಗೆ ಕಾರಣವಾಗುತ್ತದೆ. ಇದಕ್ಕೆ ವ್ಯತಿರಿಕ್ತವಾಗಿ, ಎಲ್ ನಿನೋ ಸಮುದ್ರದ ನೀರನ್ನು ಬೆಚ್ಚಗಾಗಿಸುತ್ತದೆ ಮತ್ತು ಮಾನ್ಸೂನನ್ನು ದುರ್ಬಲಗೊಳಿಸುತ್ತದೆ. ಲಾ ನಿನಾದ ತಾತ್ಕಾಲಿಕ ತಂಪಾಗಿಸುವ ಪರಿಣಾಮದ ಹೊರತಾಗಿಯೂ, ಜಾಗತಿಕ ತಾಪಮಾನವು ಇನ್ನೂ ಸರಾಸರಿಗಿಂತ ಹೆಚ್ಚಾಗಿರುತ್ತದೆ ಎಂದು ಡಬ್ಲ್ಯೂ ಎಂ ಓ ಹೇಳಿದೆ. ಲಾ ನಿನಾ ಮತ್ತು ಎಲ್ ನಿನೋದಂತಹ ನೈಸರ್ಗಿಕ ಹವಾಮಾನ ವಿದ್ಯಮಾನಗಳು ಮಾನವ–ಉಂಟುಮಾಡುವ ಹವಾಮಾನ ಬದಲಾವಣೆಯ ಸಂದರ್ಭದಲ್ಲಿ ಸಂಭವಿಸುತ್ತಿವೆ, ಇದು ಜಾಗತಿಕ ತಾಪಮಾನವನ್ನು ಹೆಚ್ಚಿಸುತ್ತಿದೆ ಮತ್ತು ತೀವ್ರ ಹವಾಮಾನ ಪರಿಸ್ಥಿತಿಗಳ ತೀವ್ರತೆಯನ್ನು ಹೆಚ್ಚಿಸುತ್ತಿದೆ.

**ಮಾರ್ಚನಿಂದ ತಟಸ್ಥ ಸ್ಥಾನ ಕಾಯ್ದುಕೊಳ್ಳಲಾಗಿದೆ:** ಸಮಭಾಜಕ ಪೆಸಿಫಿಕ್ ಪ್ರದೇಶದಲ್ಲಿ ಸಮುದ್ರ ಮೇಲ್ಮೈ ತಾಪಮಾನವು ಮಾರ್ಚ್ 2025 ರಿಂದ ಎಲ್ ನಿನೋ ಅಥವಾ ಲಾ ನಿನಾ ಪ್ರಭಾವಕ್ಕೆ ಒಳಗಾಗಿರಲಿಲ್ಲ. ತಜ್ಞರ ಪ್ರಕಾರ, ಈ ಪರಿಸ್ಥಿತಿಯು ಸೆಪ್ಟೆಂಬರ್‌ಂದ ಕ್ರಮೇಣ ಲಾ ನಿನಾ ರೂಪವನ್ನು ಪಡೆಯಬಹುದು. ಸೆಪ್ಟೆಂಬರ್–ನವೆಂಬರ್ 2025 ರಲ್ಲಿ ಇಎಓ–ತಟಸ್ಥ ಪರಿಸ್ಥಿತಿಗಳ ಸಂಭವನೀಯತೆ 45% ಎಂದು ಅಂದಾಜಿಸಲಾಗಿದೆ ಮತ್ತು ಲಾ ನಿನಾ ಸಂಭವನೀಯತೆ 55% ಆಗಿದೆ.

**ಅಕ್ಟೋಬರ್–ಡಿಸೆಂಬರ್‌ನಲ್ಲಿ ಲಾ ನಿನಾ ಸಾಧ್ಯತೆ ಹೆಚ್ಚು:** ಅಕ್ಟೋಬರ್ ಮತ್ತು ಡಿಸೆಂಬರ್ 2025 ರ ನಡುವೆ ಲಾ ನಿನಾ ಸಂಭವಿಸುವ ಸಾಧ್ಯತೆ ಸುಮಾರು 60% ಇದೆ ಎಂದು ವಿಶ್ವ ಹವಾಮಾನ ಸಂಸ್ಥೆ ವರದಿ ಮಾಡಿದೆ. ಎಲ್ ನಿನೋ ಮತ್ತು ಲಾ ನಿನಾ ಮುನ್ಸೂಚನೆಗಳು ಮತ್ತು ಅವುಗಳ ಪರಿಣಾಮಗಳು ಕೃಷಿ, ಇಂಧನ, ಆರೋಗ್ಯ ಮತ್ತು ಸಾರಿಗೆಯಂತಹ ಕ್ಷೇತ್ರಗಳಲ್ಲಿ ಲಕ್ಷಾಂತರ ಡಾಲರ್‌ಗಳನ್ನು ಉಳಿಸಬಹುದು ಎಂದು ಡಬ್ಲ್ಯೂ ಎಂ ಪ್ರಧಾನ ಕಾರ್ಯದರ್ಶಿ ಸೆಲೆಸ್ಟ್ ಸೌಲೋ ಹೇಳಿದ್ದಾರೆ. ಈ ಮುನ್ಸೂಚನೆಗಳನ್ನು ಸರಿಯಾಗಿ ಬಳಸಿದಾಗ, ಸಾವಿರಾರು ಜೀವಗಳನ್ನು ಉಳಿಸಬಹುದು ಎಂದಿದ್ದಾರೆ.

## ಬಸ್ಸಿನಲ್ಲಿ ಪ್ರಯಾಣಿಸುವಾಗ 1.12 ಲಕ್ಷ ಚಿನ್ನಾಭರಣ ಕಳವು

**ಕಲಬುರಗಿ,ಸೆ.3–**ಬಸ್ಸಿನಲ್ಲಿ ಚಿತ್ತಾಪುರದಿಂದ ಕಲಬುರಗಿಯ ರಾಜಾಪುರ ಕ್ರಾಸ್ ಹಾಗೂ ಗುಂಡಗುರ್ತಿ ಗ್ರಾಮಕ್ಕೆ ಹೋಗುವ ಮಾರ್ಗ ಮಧ್ಯದಲ್ಲಿ ಹೋಗುವಾಗ ಕಳ್ಳರು ಬ್ಯಾಗಿನಲ್ಲಿದ್ದ 1.12 ಲಕ್ಷ ರೂಪಾಯಿ ಮೌಲ್ಯದ ಚಿನ್ನಾಭರಣ ಕಳವು ಮಾಡಿದ್ದಾರೆ ಎಂದು ಮಹಿಳೆಯೊಬ್ಬರು ವಿಶ್ವವಿದ್ಯಾಲಯ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದಾರೆ.

ಬೆಂಗಳೂರಿನ ಹೊಸಕೋಟೆ ರಸ್ತೆಯ ಬಿದರಳ್ಳಿ ಟೀಚರ್ಸ್ ಕಾಲೋನಿ ನಿವಾಸಿ ರಂಜಿತಾ ಕೆಲ್ಲೂರ್ ಎಂಬುವವರೆ ದೂರು ಸಲ್ಲಿಸಿದ್ದು, ಗುಂಡಗುರ್ತಿ ಗ್ರಾಮದಲ್ಲಿ ಸಂಬಂಧಿಕರ ಕುಪ್ಪಸ (ಸೀಮಂತ) ಕಾರ್ಯಕ್ರಮವಿದ್ದ ಪ್ರಯುಕ್ತ ಇವರು ತಮ್ಮ ತಾಯಿ ಸಾವಿತ್ರಮ್ಮಾ ಅವರೊಂದಿಗೆ ಬೆಂಗಳೂರಿನಿಂದ ಚಿತ್ತಾಪುರಕ್ಕೆ ಬಂದಿದ್ದಾರೆ. ಚಿತ್ತಾಪುರದಿಂದ ಬಸ್ಸಿಗೆ ಹೊರಟು ಶಹಾಬಾದ ರಿಂಗ್ ರೋಡ್ ರಾಜಾಪುರ ಕ್ರಾಸ್ ಹತ್ತಿರ ಇಳಿದಿದ್ದಾರೆ. ಅಲ್ಲಿಂದ ಸೇಡಂಗೆ ಹೋಗುವ ಬಸ್ ಹತ್ತಿ ಗುಂಡುಗುರ್ತಿಗೆ ತೆರಳಿದ್ದಾರೆ.

ಸಂಬಂಧಿಕರ ಮನೆಗೆ ಹೋಗಿ ಬ್ಯಾಗ್ ಪರಿಶೀಲಿಸಿದಾಗ ಅದರಲ್ಲಿದ್ದ 72 ಸಾವಿರ ರೂ.ಮೌಲ್ಯದ 9 ಗ್ರಾಂ.ಬಂಗಾರದ ಬ್ರಾಲೇಟ್, 40 ಸಾವಿರ ರೂ.ಮೌಲ್ಯದ 5 ಗ್ರಾಂ.ಬಂಗಾರದ ಪದಕವುಳ್ಳ ಲಾಕೇಟ್ ಕಳವಾಗಿರುವುದು ಬೆಳಕಿಗೆ ಬಂದಿದೆ. ಚಿತ್ತಾಪುರದಿಂದ ಕಲಬುರಗಿಯ ರಾಜಾಪುರ ಕ್ರಾಸ್ ಹಾಗೂ ಗುಂಡಗುರ್ತಿ ಗ್ರಾಮದ ಮಧ್ಯದ ಮಾರ್ಗದಲ್ಲಿ ಕಳ್ಳರು ಚಿನ್ನಾಭರಣ ಕಳವು ಮಾಡಿದ್ದಾರೆ ಎಂದು ದೂರಿನಲ್ಲಿ ತಿಳಿಸಿದ್ದಾರೆ. ವಿಶ್ವವಿದ್ಯಾಲಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

## ಯಾಂತ್ರಿಕ ಜಗತ್ತಿನಲ್ಲಿ ಮಕ್ಕಳಿಗೆ ಸಂಸ್ಕೃತಿ ಕಲಿಸಿ:ಡಾ ಎಸ್ ವ್ಹಿ ಪಾಟೀಲ

**ಬೀದರ, ಸೆ.3–**ಮಕ್ಕಳಲ್ಲಿ ಅನೇಕ ಪ್ರತಿಭೆಗಳಿವೆ. ಪ್ರೋತ್ಸಾಹಗಳಿರದ ಕಾರಣ ಮಕ್ಕಳು ಬೆಳೆಯಲು ಅನಾನೂಲ. ಇಂದಿನ ವ್ಯವಸ್ಥೆಯಲ್ಲಿ ಮಕ್ಕಳು ಎಲ್ಲ ಕ್ಷೇತ್ರದಲ್ಲಿ ಮುಂಚೂಣಿಯಲ್ಲಿರಲು ಇಂಥ ವೈವಿಧ್ಯ ಮಯ ಸಾಂಸ್ಕೃತಿಕ ಸ್ಪರ್ಧೆಗಳು ಅನಿವಾರ್ಯ ಎಂದು ತೋಟಗಾರಿಕೆ ಕಾಲೇಜ್ ನ ಡೀನರಾದ ಡಾ. ಎಸ್ ವ್ಹಿ ಪಾಟೀಲ ಅಭಿಪ್ರಾಯ ಪಟ್ಟರು.

ವಚನ ಚಾರಿಟೇಬಲ್ ಸೊಸೈಟಿ ವತಿಯಿಂದ ಶ್ರಾವಣ ಮಾಸ ನಿಮಿತ್ತ ಹಮ್ಮಿಕೊಂಡ ಕಂಠ ಪಾಠ, ನಿಭಂಧ, ಭಾಷಣ ಹಾಗೂ ತಪ್ಪುರಹಿತ ಕನ್ನಡ ಶುದ್ಧ ಬರಹ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಸಸಿಗೆ ನೀರೆರೆದು ಉದ್ಘಾಟಿಸಿ ಡಾ ಎಸ್ ವ್ಹಿ ಪಾಟೀಲ ಮುಂದುವರೆದು ಮಾತನಾಡುತ್ತ ವಚನಗಳು ಬದುಕಿನ ದಾರಿದೀಪ. ಹನ್ನೆರಡನೆ ಶತಮಾನದ ಬಸವಾದಿ ಶರಣರ ಕಾಯಕ ಇಡೀ ಜಗತ್ತಿಗೆ ಮಾದರಿಯಾಗಿದೆ. ಕಾಯಕವೇ ಕೈಲಾಸವಾದರೆ ಇಂದಿನ ಅನೇಕ ಸಮಸ್ಯೆಗಳು ಹೇಳ ಹೆಸರಿಲ್ಲದೆ ಮಾಯವಾಗುತ್ತವೆ.

ಪ್ರಾರಂಭದಲ್ಲಿ ಮಕ್ಕಳಿಗೆ ಕನಿಷ್ಠ ಐದಾದರೂ ವಚನ ಬರಲೇಬೇಕು, ಮಗು ದೊಡ್ಡದಾದ ಮೇಲೆ ಅಥವಾ ತಿಳುವಳಿಕೆ ಬಂದ ಮೇಲೆ ಅದು ಅರಿತುಕೊಳ್ಳುತ್ತದೆ. ಇಂದು ವಚನ ಚಾರಿಟೇಬಲ್ ಸೊಸೈಟಿ ಅವರು ಪ್ರಾಥಮಿಕ, ಪ್ರೌಢ, ಪಿಯುಸಿ, ಪದವಿ ಮಕ್ಕಳಿಗೆ ಅನುಗುಣವಾಗಿ ಸ್ಪರ್ಧೆ ಏರ್ಪಡಿಸಿ ಅವರಿಗೆಲ್ಲರಿಗೆ ಪ್ರಥಮ ಬಹುಮಾನ ರೂ.3000/, ದ್ವಿತೀಯ ಬಹುಮಾನ ರೂ.2000/ ತೃತೀಯ ಬಹುವಾನ ರೂ.1000/ ಕೊಡುತ್ತಿರುವುದು ನಿಜವಾಗಲೂ ಶ್ಲಾಘನೀಯ ವಿಷಯವಾಗಿದೆ.

ವಚನ ಚಾರಿಟೇಬಲ್ ಸಾಮಾಜಿಕ ಕೆಲಸ ಎಲ್ಲರೂ ಮೆಚ್ಚಲೇಬೇಕೆಂದು ಹೇಳಿದರು. ಮುಖ್ಯ ಅತಿಥಿಗಳಾದ ಹಲಬರ್ಗಾ ಕೆ.ಪಿ.ಎಸ್. ಶಾಲೆಯ ಶಿಕ್ಷಕಿಯರು ಹಾಗೂ ಕವಿಗಳಾದ ಧನಲಕ್ಷ್ಮಿ ಪಾಟೀಲ ಮಾತನಾಡಿ ಮಕ್ಕಳಲ್ಲಿಯ ಸುಪ್ತ ಭಾವನೆ ಇಂಥ ಸ್ಪರ್ಧೆಗಳಿಂದ ಹೊರ ಹೊಮ್ಮಲು ಒಂದು ಪ್ರೇರಣೆ ನೀಡಬಲ್ಲದು. ಇಂದಿನ ಮಕ್ಕಳು ಮೊಬೈಲ್ ದಿಂದಾಗಿ ನೋಡಬಾರದನ್ನು ಗ್ರಹಿಸಿ ಸಂಸ್ಕೃತಿ ಹಾಳಾಗಿ ಅನೇಕ ಮಕ್ಕಳ ಜೀವನ ಜರ್ಝರಿತಗೊಂಡಿರುವುದು ನಾವು ಬಲ್ಲೆವು. ಇಂದು ಶಿಕ್ಷಣದ ಜೊತೆಗೆ ಮಾನವೀಯ ಮೌಲ್ಯ ಪ್ರತಿಪಾದಿಸುವ ವಚನಗಳು ಪಠ್ಯಕ್ರಮದಲ್ಲಿ ಅಳವಡಿಸಿದರೆ ತುಂಬಾ ಒಳ್ಳೆಯದು. ಒಂಬತ್ತು ನೂರು ವರ್ಷಗಳ ಹಿಂದೆ ಅಕ್ಕಮಹಾದೇವಿ ಉಡುತಡಿಯಿಂದ ಬಸವ ಕಲ್ಯಾಣಕ್ಕೆ ಎಂಥ ಆತ್ಮ ವಿಶ್ವಾಸ ಇಟ್ಟು ಕೊಂಡು ಬಂದಿದ್ದು ಅರ್ಥೈಸಿಕೊಂಡರೆ ಮನ ಮೈ ರೋಮಾಂಚನಗೊಳ್ಳುತ್ತದೆಂದು ನುಡಿದರು. ಇಂಥ ಕಾರ್ಯಕ್ರಮದಿಂದ ಮಕ್ಕಳಲ್ಲಿ ಓದುವ ಹವ್ಯಾಸ ಜೊತೆಗೆ ಸ್ಪರ್ಧಾತ್ಮಕ ಮನೋಭಾವ ಬೇರೂರಲು ಸಾಧ್ಯ ಎಂದು ನುಡಿದರು.



ಅನುಭವ ಎಜ್ಯುಕೇಷನ್ ಆಯಿಂಡ ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷರಾದ ಲಿಂಗಾರತಿ ನಾವದಗೇರೆ ಪ್ರಾಸ್ತಾವಿಕ ಮಾತನಾಡಿ ದಿನೇ ದಿನೇ ನಮ್ಮ ಸಂಸ್ಕೃತಿ ಹಾಳಾಗುತ್ತಿದೆ. ಪಾಲಕರಾದ ನಾವೆ ಕಾರಣರು. ನಾವೆಲ್ಲರೂ ಹೀಗೆ ಕುಳಿತರೆ ಇಡೀ ಸುಂದರ ಸಮಾಜ ಹಾಳಾಗಿ ಮಕ್ಕಳು ಅಧೋಗತಿ ತಲುಪುವುದನ್ನು ತಪ್ಪಿಸಲು ನಾವಿಂದು ಇಂಥ ವೈಚಾರಿಕ ಕಾರ್ಯಕ್ರಮ ಹಮ್ಮಿಕೊಂಡಿದ್ದೇವೆ ಎಂದು ನುಡಿದರು.

ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷರಾದ ಡಾ ಸುರೇಶ ಪಾಟೀಲ ಅಧ್ಯಕ್ಷತೆ ವಹಿಸಿ.. ಸಮಾನ ಮನಸ್ಕರೂ ಸೇರಿ ಕೊಂಡು ಪ್ರತಿ ತಿಂಗಳು ಅನುದಾನ ಕ್ರೋಢಿಕರಣ ಮಾಡಿಕೊಂಡು ತಕ್ಕ ಮಟ್ಟಿಗೆ ಸಮಾಜ ಕಟ್ಟುವ ಕೆಲಸದಲ್ಲಿ ಕಳೆದ ಐದು ವರ್ಷಗಳಿಂದ ನಾವೆಲ್ಲರೂ ದಾಪುಗಾಲು ಹಾಕುತ್ತಿದ್ದೇವೆ, ಸಮಾಜದ ಪ್ರತಿಯೊಬ್ಬರು ಧನಾತ್ಮಕವಾಗಿ ಸ್ಪಂದನೆ ನೀಡಿ ಪ್ರೋತ್ಸಾಹ ನೀಡುತ್ತಿರುವು ದರಿಂದಲೇ ನಮ್ಮ ಸಂಸ್ಥೆ ಇಂದು ಬೆಳಕಿಗೆ ಬಂದಿದೆ, ತಮ್ಮೆಲ್ಲರ ಸಹಕಾರ ಮರೆಯಲಾಗದು ಎಂದು ನುಡಿದರು.

ಸನ್ಮಾನಿತರ ಪರವಾಗಿ ಎಂಟನೇ ವರ್ಷದ ಮಗು ಅಕ್ಕಮಹಾದೇವಿ ಬಗ್ಗೆ ಮೂರು ನಿಮಿಷದಲ್ಲಿ ಅತ್ಯುತ್ತಮ ಮಾತನಾಡಿದರು ಜೊತೆಗೆ ಸಾಂಸ್ಕೃತಿಕ ನಾಯಕ ವಿಶ್ವಗುರು ಬಸವಣ್ಣನವರ ಬಗ್ಗೆ ಸೃಷ್ಟಿ ಸೋಮನಾಥ ಜೊನ್ನಿಕೇರಿ ಮಾತನಾಡಿ ಎಲ್ಲರಿಗೆ ಅಚ್ಚರಿಗೊಳಿಸಿದರು. ಮೊದಲಿಗೆ ವೈಜಿನಾಥ ಸಜ್ಜನಶೆಟ್ಟಿ ವಚನಗಳು ಹಾಡಿದರು. ನಿರ್ದೇಶಕರಾದ ಡಾ ಸಿ ಆರ್ ಕೊಂಡ ಸ್ವಾಗತಿಸಿದರೆ, ಸಂಗಾರೆಡ್ಡಿ ಕೊತ್ತ ನಿರೂಪಣೆ ಮಾಡಿದರೆ ದಾನಾ ಸಂತೋಷ ವಂದಿಸಿದರು.

## ರಾಜ್ಯಮಟ್ಟದ ಮಹರ್ಷಿ ವಾಲ್ಮೀಕಿ ಪ್ರಶಸ್ತಿಗೆ ಅರ್ಜಿ ಆಹ್ವಾನ

**ರಾಯಚೂರ್ರು,ಸೆ.3–**2025–26ನೇ ಸಾಲಿಗೆ ಶ್ರೀ ಮಹರ್ಷಿ ವಾಲ್ಮೀಕಿ ಅವರ ಸ್ಮರಣಾರ್ಥ ಅಕ್ಟೋಬರ್ 07ರಂದು ನಡೆಯುವ ವಾಲ್ಮೀಕಿ ಜಯಂತಿಯಂದು ರಾಜ್ಯಮಟ್ಟದ ಪ್ರಶಸ್ತಿ ನೀಡಲು ಪರಿಶಿಷ್ಟ ವರ್ಗದವರ ಏಳಿಗೆಗಾಗಿ ಶ್ರಮಿಸಿದ ವ್ಯಕ್ತಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಸರ್ಕಾರಿ ಆದೇಶದಲ್ಲಿರುವ ಮಾರ್ಗಸೂಚಿಯ ಅಂಶಗೊಳಪಟ್ಟು ಪರಿಶಿಷ್ಟ ವರ್ಗದವರ ಏಳೆಗೆಗಾಗಿ ಶ್ರಮಿಸಿದ ವ್ಯಕ್ತಿಗಳು ನಿಗದಿತ ಅರ್ಜಿ ನಮೂನೆಯನ್ನು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು ರಾಯಚೂರು ಅಥವಾ ಆಯಾ ತಾಲೂಕಿನ ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿಗಳ ಕಚೇರಿಯಿಂದ ಪಡೆದು ತಮ್ಮ ಪೂರ್ಣ ವ್ಯಕ್ತಿ ಪರಿಚಯ, ಸಾಧನೆ ಹಾಗೂ 2 ಭಾವಚಿತ್ರಗಳೊಂದಿಗೆ ನಿಗದಿತ ಅರ್ಜಿ ನಮೂನೆಯಲ್ಲಿ ಭರ್ತಿ ಮಾಡಿ ಸೆಪ್ಟೆಂಬರ್ 12ರೊಳಗಾಗಿ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು, ರಾಯಚೂರು ಕಾರ್ಯಾಲಯ ಅಥವಾ ಆಯಾ ತಾಲೂಕಿನ ತಾಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿಗಳ ಕಚೇರಿಗಳಿಗೆ ಸಲ್ಲಿಸುವಂತೆ ಮಹರ್ಷಿ ವಾಲ್ಕೀಕಿ ಜಯಂತಿ ಆಚರಣಾ ಸಮಿತಿಯ ಸದಸ್ಯ ಕಾರ್ಯದರ್ಶಿಗಳು ಆಗಿರುವ ರಾಯಚೂರು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸೆ.07ರಂದು ಜಿಲ್ಲಾಡಳಿತದಿಂದ ಬ್ರಹ್ಮಶ್ರೀ ನಾರಾಯಣ ಗುರು ಜಯಂತಿ

**ರಾಯಚೂರು,ಸೆ.3–**ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಸೆಪ್ಟೆಂಬರ್ 07ರ ಬೆಳಿಗ್ಗೆ 11.30 ಗಂಟೆಗೆ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಬ್ರಹ್ಮಶ್ರೀ ನಾರಾಯಣ ಗುರು ಜಯಂತಿ ಹಮ್ಮಿಕೊಳ್ಳಲಾಗಿದೆ.

ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಉದ್ಘಾಟಿಸುವರು. ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು.

ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ರಾಯಚೂರು ಮಹಾನಗರ ಪಾಲಿಕೆಯ ಪ್ರಭಾರ ಅಧ್ಯಕ್ಷರಾದ ನರಸಮ್ಮ ನರಸಿಂಹಲು ಮಾಡಗಿರಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್, ಕಲಬುರಗಿ ವಿಭಾಗದ ಆಯುಕ್ತರಾದ ಜಹೀರಾ ನಸೀಮ್, ಆರ್ಯ ಈಡಿಗ ಸಮಾಜದ ಜಿಲ್ಲಾಧ್ಯಕ್ಷರಾದ ಎಂ.ನರಸನಗೌಡ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ, ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿರುವರು.ಉಡುಪಿಯ ನಿವೃತ್ತ ಉಪನ್ಯಾಸಕರಾದ ದಯಾನಂದ ಡಿ ಅವರು ಬ್ರಹ್ಮಶ್ರೀ ನಾರಾಯಣ ಗುರು ಅವರ ಕುರಿತು ಉಪನ್ಯಾಸ ನೀಡುವರು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H